ಸಂಪುಟ : 10 ಸಂಚಿಕೆ: 114 ಪುಟ : 4+2 ಬೆಲೆ: 3.00 ಶುಕ್ರವಾರ ಜೂನ್ 06 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 114 Pages : 4+2 Price : 3.00 Friday June 06 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಅಂಧ ಮಕ್ಕಳ ಪಾಲಕರ/ ಪೋಷಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ವತಿಯಿಂದ ಅಂಧ ಬಾಲಕರಿಗಾಗಿ ಹುಬ್ಬಳ್ಳಿ ಪಟ್ಟಣದಲ್ಲಿ ಅಂಧ ಬಾಲಕರ ಸರಕಾರಿ ಪಾಠಶಾಲೆಯು ನಡೆಯುತ್ತಿದ್ದು, ಸದರಿ ವಿಶೇಷ ಶಾಲೆಯು ಸಂಪೂರ್ಣ ಉಚಿತ ಶಿಕ್ಷಣ, ಸುಸಜ್ಜಿತ ಕಟ್ಟಡ ಮತ್ತು ಸಕಲ ಸೌಲಭ್ಯಗಳನ್ನು ಹೊಂದಿದೆ, ಅಂಧ ಮಕ್ಕಳ ಪಾಲಕರು/ಪೋಷಕರು ಭೇಟಿ ನೀಡಿ ಪ್ರವೇಶಾತಿ ಪಡೆಯಬಹುದಾಗಿದೆ . ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ : 9964439770, ಇ-ಮೇಲ್ ಐಡಿ : (govtschool-fortheblindhgmail.com ) ದೂರವಾಣಿ ಸಂಖ್ಯೆ : 0836-2959443 ಸಂಪರ್ಕಿಸಬಹುದು.

## ಜೂ. 11ರಂದು ಲೋಕಾಯುಕ್ತ ಜನ ಸಂಪರ್ಕ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಅವರ ನಿರ್ದೇಶನದಂತೆ ಕರ್ನಾಟಕ ಲೋಕಾಯುಕ್ತ, ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ಜೂನ್ 11 ರಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1.00 ಗಂಟೆಯವರೆಗೆ ತಹಸೀಲ್ದಾರ್ ಕಚೇರಿ ಸಭಾ ಭವನ ರೋಣದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಅಂದು ಸಾರ್ವಜನಿಕರಿಂದ ದೂರು/ಅಹವಾಲುಗಳನ್ನು ಸ್ವೀಕರಿಸಲಾಗುವುದು ಎಂದು ಗದಗ ಕರ್ನಾಟಕ ಲೋಕಾಯಕ್ತ ಪೊಲೀಸ್ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಕ್ರೀದ ಹಿನ್ನೆಲೆ: ಹೆಚ್ಚುವರಿ ಬಸ್ ಸಂಚಾರ

■ವಿಜಯಸಾಕ್ಷಿ ಸುದ್ದಿ, ಗದಗ

ಜೂನ್ ತಿಂಗಳ ಮೊದಲನೇ ವಾರಾಂತ್ಯದಲ್ಲಿ ಜೂನ್ 6 ರಂದು ಶುಕ್ರವಾರ ಹಾಗೂ 7 ರಂದು ಶನಿವಾರ ಬಕ್ರೀದ ಹಬ್ಬ ಇರುವ ಕಾರಣ ಜೂನ್ 6 ರಿಂದ 8 ರವರೆಗೆ ಮದುವೆ/ಇತರೆ ಸಮಾರಂಭಗಳು, ವಿವಿಧ ಸ್ಥಳಗಳಿಗೆ ಹಾಗೂ ಪ್ರವಾಸಿ ತಾಣಗಳಿಗೆ ಹೋಗಲು ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಬಸ್ ನಿಲ್ದಾಣಕ್ಕೆ ಆಗಮಿಸುವ ನಿರೀಕ್ಷೆ ಇರುವುದರಿಂದ ಸೂಕ್ತ ಸಾರಿಗೆ ವ್ಯವಸ್ಥೆಯನ್ನು ಒದಗಿಸಬೇಕಾಗಿದೆ. ಈ ಹಿನ್ನೆಲೆಯಲ್ಲಿ ವಾ.ಕ.ರ.ಸಾ.ಸಂಸ್ಥೆಯ ವ್ಯಾಪ್ತಿಯ ವಿವಿಧ ವಿಭಾಗಗಳಿಂದ ಸುಮಾರು 130 ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಹಾವೇರಿ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ ಹಾಗೂ ಶಿರಸಿ ಸ್ಥಳಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕ ಪ್ರಯಾಣಿಕರು ಪ್ರಯಾಣಿಸುವ ನಿರೀಕ್ಷೆ ಇರುವುದರಿಂದ ಹಾಗೂ ವಾರಾಂತ್ಯದ ಜೂನ್ 6 ಮತ್ತು ಜೂನ್ 7 ರಂದು ಬೆಂಗಳೂರಿನಿಂದ ವಿವಿಧ ಸ್ಥಳಗಳಿಗೆ ತೆರಳಲು ವಿಶೇಷ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ.

ಹೆಚ್ಚುವರಿ ಸಾರಿಗೆಗಳ ಸದುಪಯೋಗ ಪಡಿಸಿಕೊಳ್ಳುವದರೊಂದಿಗೆ, ಸುಖಕರ ಹಾಗೂ ಸುರಕ್ಷಿತ ಪ್ರಯಾಣಕ್ಕಾಗಿ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸುವಂತೆ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಕಟಣೆ ತಿಳಿಸಿದೆ.

### ಕಳೆದುಹೋದ ಮೊಬೈಲ್‌ಗಳನ್ನು ಮೂಲ ವಾರಸುದಾರರಿಗೆ ಹಸ್ತಾಂತರಿಸಿದ ಎಸ್‌ಪಿ ಬಿ.ಎಸ್. ನೇಮಗೌಡ

# ತಮ್ಮ ವಸ್ತುಗಳನ್ನು ಸುರಕ್ಷಿತವಾಗಿರಿಸಿಕೊಳ್ಳಿ



■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸರ್ಕಾರ ಕಳೆದುಹೋದ ಹಾಗೂ ಕಳ್ಳತನ ಮಾಡಿದ ಮೋಬೈಲ್‌ಗಳನ್ನು ಪತ್ತೆ ಮಾಡುವ ಕುರಿತು ಸಿ.ಇ.ಐ.ಆರ್ ಪೋರ್ಟಲ್‌ನ್ನು ಫೆಬ್ರವರಿ-2023ರಲ್ಲಿ ಜಾರಿಗೆ ತಂದಿದ್ದು, ಈ ತಂತ್ರಾಂಶವನ್ನು ಪರಿಣಾಮಕಾರಿಯಾಗಿ ಜಾರಿ ಮಾಡಿ ಹಾಗೂ ಗದಗ ಜಿಲ್ಲೆಯಲ್ಲಿ ಮೊಟ್ಟ ಮೊದಲು ಮೋಚಿಫೈ ಅಪ್ಲಿಕೇಶನ್ ಅನ್ನು ಫೆಬ್ರವರಿ 15, 2023ರಂದು ಪ್ರಾರಂಭಗೊಳಿಸಿ ಇದರ ಸಹಾಯದಿಂದ 136 ಮೊಬೈಲ್‌ಗಳನ್ನು ಪತ್ತೆಹಚ್ಚಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ತಿಳಿಸಿದರು.

ಸಂಬಾಪುರ ರಸ್ತೆಯಲ್ಲಿರುವ ಪೊಲೀಸ್ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸಿಇಎನ್ ಠಾಣೆಯಿಂದ-18, ರೋಣ ಠಾಣೆ-14, ಬೆಟಗೇರಿ ಠಾಣೆ-4, ಎಕ್ಷನ್ ಠಾಣೆ -10, ಮುಂಡರಗಿ ಠಾಣೆ -21, ಗಜೇಂದ್ರಘಡ ಠಾಣೆ -13, ನರೇಗಲ್ ಠಾಣೆ -4, ನರಗುಂದ ಠಾಣೆ -25, ಗದಗ ರೂರಲ್ ಠಾಣೆ -11, ಗದಗ ಟೌನ್ ಠಾಣೆ -7, ಲಕ್ಷ್ಮೇಶ್ವರ ಠಾಣೆ 9 ಸೇರಿದಂತೆ ಒಟ್ಟು 136 ಮೊಬೈಲ್ ಪತ್ತೆಹಚ್ಚಲಾಗಿದ್ದು, ಶ್ರಮಿಸಿದ ಅಧಿಕಾರಿಗಳಿಗೆ ಸೂಕ್ತ ಬಹುಮಾನ ನೀಡಲಾಗುವುದು ಎಂದು ಘೋಷಿಸಿದರು. ಈ ಸಂದರ್ಭದಲ್ಲಿ ಎ.ಎಸ್.ಪಿ ಎಂ.ಬಿ. ಸಂಕದ್, ಗದಗ ಡಿ.ಎಸ್.ಪಿ ಮುರ್ತುಜಾ ಖಾದ್ರಿ, ನರಗುಂದ ಉಪ ವಿಭಾಗದ ಡಿ.ಎಸ್.ಪಿ ಪ್ರಭುಗೌಡ್ರ, ಗದಗ ಡಿ.ಎ.ಆರ್ ಡಿಎಸ್ಪಿ ವಿದ್ಯಾನಂದ ನಾಯಕ್, ಗದಗ ಶಹರ ಪಿ.ಐ ಡಿ.ವ್ಹಿ. ಪಾಟೀಲ, ಬೆಟಗೇರಿ ಸಿ.ಪಿ.ಐ ಧೀರಜ್ ಸಿಂಧೆ ಹಾಗೂ ಗ್ರಾಮಿಣ ಠಾಣೆಯ ಪಿ.ಐ. ಸಿದ್ದರಾಮೇಶ್ವರ ಸೇರಿದಂತೆ ಮುಂಡರಗಿ, ಲಕ್ಷ್ಮೇಶ್ವರ, ಶಿರಹಟ್ಟಿ, ಗಜೇಂದ್ರಘಡ ಠಾಣೆ-ಯ ಹಿರಿಯ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

> ಅಗತ್ಯ ತಂತ್ರಾಂಶ ಬಳಸಿಕೊಂಡು ಸ್ವತಃ ನಾವೇ ಸುಮಾರು 4,063 ದೂರುಗಳನ್ನು ದಾಖಲಿಸಿಕೊಂಡಿದ್ದೆವು. ಈವರೆಗೆ ರೂ 1,78,29,658 ಮೌಲ್ಯದ 1,121 ಮೊಬೈಲ್‌ಗಳನ್ನು ಸಾರ್ವಜನಿಕರಿಗೆ ಮರಳಿ ನೀಡಲಾಗಿದೆ. ಗುರುವಾರ 24,70,530 ರೂ ಮೌಲ್ಯದ 136 ಮೊಬೈಲ್‌ಗಳನ್ನು ಸಾರ್ವಜನಿಕರಿಗೆ ಮರಳಿ ನೀಡಲಾಗಿದ್ದು, ಇಲ್ಲಿಯುವರೆಗೆ ಒಟ್ಟು 2,03,00198 ರೂ ಮೌಲ್ಯದ 1,257 ಮೊಬೈಲ್‌ಗಳನ್ನು ಸಾರ್ವಜನಿಕರಿಗೆ ಮರಳಿ ನೀಡಲಾಗಿದೆ. ಮುಂದೆ ಸಾರ್ವಜನಿಕರು ತಮ್ಮ ವಸ್ತುಗಳನ್ನು ಸುರಕ್ಷಿತವಾಗಿ ಇಟ್ಟುಕೊಳ್ಳಬೇಕು ಎಂದು ಎಸ್‌ಪಿ ಬಿ.ಎಸ್. ನೇಮಗೌಡ ಕಿವಿಮಾತು ಹೇಳಿದರು.



### ‘ಕಾಲ್ತುಳಿತ ಪ್ರಕರಣಕ್ಕೆ ರಾಜ್ಯ ಸರ್ಕಾರವೇ ನೇರ ಹೊಣೆ’ ಎಂದ ಶಾಸಕ ಸಿ.ಸಿ. ಪಾಟೀಲ

# ವಿಜಯೋತ್ಸವ ಆಯೋಜಿಸುವ ಅಗತ್ಯ ಏನಿತ್ತು?

■ವಿಜಯಸಾಕ್ಷಿ ಸುದ್ದಿ, ಗದಗ

ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ಅಸಂಖ್ಯಾತ ಅಭಿಮಾನಿಗಳಿದ್ದಾರೆ. ಅವರೆಲ್ಲರ ಮೆಚ್ಚುಗೆ ಪಡೆಯುವ ಏಕೈಕ ಉದ್ದೇಶದಿಂದ ರಾಜ್ಯ ಸರ್ಕಾರ ತರಾತುರಿಯಲ್ಲಿ ವಿಜಯೋತ್ಸವ ಆಯೋಜಿಸಿ ಅಮಾಯಕರ ಜೀವ ಬಲಿ ಪಡೆದಿದೆ. ಬೆಂಗಳೂರಿನಲ್ಲಿ ನಡೆದ ಕಾಲ್ತುಳಿತ ಪ್ರಕರಣಕ್ಕೆ ರಾಜ್ಯ ಸರ್ಕಾರವೇ ನೇರ ಹೊಣೆ ಎಂದು ಶಾಸಕ ಸಿ.ಸಿ. ಪಾಟೀಲ ರಾಜ್ಯ ಸರ್ಕಾರದ ವಿರುದ್ಧ ಗಂಭೀರ ಆರೋಪ ಮಾಡಿದರು.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಾಗೆ ನೋಡಿದರೆ ವಿಜಯೋತ್ಸವ ಕಾರ್ಯಕ್ರಮ ಆಯೋಜಿಸುವ ಅಗತ್ಯವೇ ಇರಲಿಲ್ಲ. ಆರ್‌ಸಿಬಿ ತಂಡವೇನು ದೇಶಕ್ಕಾಗಿ ಪಂದ್ಯ ಆಡಿಲ್ಲ. ಐಪಿಎಲ್ ಅಂದರೆ ದುಡ್ಡು ಮಾತ್ರ. ಅದರಲ್ಲಿ ಭಾಗವಹಿಸುವ ಆಟಗಾರರು ಕೋಟ್ಯಂತ ರೂಪಾಯಿಗೆ ಹರಾಜಾಗಿರುತ್ತಾರೆ. ವೈಯಕ್ತಿಕ ಲಾಭಕ್ಕಾಗಿ ಆಡಿ ಗೆದ್ದವರನ್ನು ಅಭಿನಂದಿಸುವ ಜರೂರು ಏನಿತ್ತು ಎಂದು ಅವರು ಪ್ರಶ್ನಿಸಿದರು.

ವಿಜಯೋತ್ಸವ ಕಾರ್ಯಕ್ರಮ ಆಯೋಜಿಸಬೇಡಿ ಎಂದು ಯಾವ ಅಧಿಕಾರಿಗಳೂ ಹೇಳಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಹಾಗಿದ್ದರೆ ಈ ಘಟನೆಗೆ ಯಾರು ಹೊಣೆ? ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಉಗ್ರರು ದಾಳಿ ನಡೆಸಿದಾಗ ಗುಪ್ತಚರ ಇಲಾಖೆ ವೈಫಲ್ಯದಿಂದ ಇಷ್ಟೆಲ್ಲಾ ಆಯಿತು ಎಂದು ಕಾಂಗ್ರೆಸ್ ಮುಖಂಡರು ಬಾಯಿ ಬಡಿದುಕೊಂಡರು. ‘ಪುಷ್ಪ 2’ ಸಿನಿಮಾ ಬಿಡುಗಡೆ ಸಂದರ್ಭದಲ್ಲಿ ಥಿಯೇಟರ್‌ನಲ್ಲಿ ನೂಕುನುಗ್ಗಲಾಗಿ ಅಭಿಮಾನಿಯೊಬ್ಬ ಸತ್ತಾಗ ಇವರದ್ದೇ ಸರ್ಕಾರ ನಟ ಅಲ್ಲು ಅರ್ಜುನ್ ಅವರನ್ನು ಜೈಲಿಗಟ್ಟಿತು. ಈಗ ಯಾವುದೇ ಪೂರ್ವ ತಯಾರಿ ಇಲ್ಲದೇ ಮಾಡಿದ ಕಾರ್ಯಕ್ರಮದಿಂದ 11 ಮಂದಿ ಸತ್ತಿದ್ದಾರೆ. ಇದಕ್ಕೆ ಯಾರನ್ನು ಜೈಲಿಗೆ ಹಾಕುತ್ತೀರಿ ಎಂದು ಪ್ರಶ್ನಿಸಿದರು.

ಘಟನೆಗೆ ಸಂಬಂಧಿಸಿದಂತೆ ನ್ಯಾಯಾಂಗ ತನಿಖೆ ನಡೆಸಿದರೆ ಸಾಲದು. ಅವಕಾಶ ಇದ್ದಲ್ಲಿ ಹಾಲಿ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆ ಮಾಡಿಸಬೇಕು. ಇಲ್ಲವಾದರೆ, ಸಿಬಿಐಗೆ ವಹಿಸಬೇಕು. ಆರ್‌ಸಿಬಿ ತಂಡದ ಬಳಿ ಹಣಕ್ಕೇನೂ ಕೊರತೆ ಇಲ್ಲ. ಕಾಲ್ತುಳಿತದಲ್ಲಿ ಮೃತಪಟ್ಟವರ ಕುಟುಂಬಕ್ಕೆ ತಲಾ 50 ಲಕ್ಷ ರೂ ಪರಿಹಾರ ಕೊಡಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಪ್ರಶಾಂತ ನಾಯ್ಕರ, ಎಂ.ಎಸ್. ಕರಿಗೌಡ್ರ, ವಿನಾಯಕ ಮಾನ್ವಿ, ರಾಘವೇಂದ್ರ ಯಳವತ್ತಿ, ಸಿದ್ದು ಪಲ್ಲೇದ, ಉಷಾ ದಾಸರ, ವಿಜಯಲಕ್ಷ್ಮೀ ಮಾನ್ವಿ, ಎಂ.ಎಂ. ಹಿರೇಮಠ ಇದ್ದರು.




> ಆರ್‌ಸಿಬಿ ತಂಡದ ಆಟಗಾರರನ್ನು ಅಭಿನಂದಿಸಲು ಬಂದ ಅಭಿಮಾನಿಗಳ ಪೈಕಿ ಕಾಲ್ತುಳಿತಕ್ಕೆ ಸಿಕ್ಕು 11 ಮಂದಿ ಪ್ರಾಣ ಕಳೆದುಕೊಂಡಿದ್ದಾರೆ.
>
> ಆದರೆ, ಆರ್‌ಸಿಬಿ ಆಟಗಾರರಿಗೆ ಈ ಬಗ್ಗೆ ಕಿಂಚಿತ್ತೂ ನೋವು, ಆಘಾತ ಆದಂತೆ ಕಾಣಿಸಿಲ್ಲ. ಕನಿಷ್ಠ ಪಕ್ಷ 11 ಮಂದಿ ಅಭಿಮಾನಿಗಳ ಆತ್ಮಕ್ಕೆ ಶಾಂತಿ ಕೋರಿ ಮೇಣದಬತ್ತಿ ಹಚ್ಚಿ ವಿಷಾದವನ್ನೂ ವ್ಯಕ್ತಪಡಿಸಿಲ್ಲ ಎಂದು ಶಾಸಕ ಸಿ.ಸಿ. ಪಾಟೀಲ ಅಸಮಾಧಾನ ವ್ಯಕ್ತಪಡಿಸಿದರು.

## ವಿವಿಧೆಡೆ ಜಿ.ಪಂ ಸಿಇಓ ಭೇಟಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಅವರು ಶಿರಹಟ್ಟಿ ತಾಲೂಕಿನಲ್ಲಿ ನಬಾರ್ಡ್ ಯೋನೆಯಡಿ ಪ್ರಗತಿಯಲ್ಲಿರುವ 100 ಹಾಸಿಗೆಯ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಇದೇ ಸಂದರ್ಭದಲ್ಲಿ ಶಿರಹಟ್ಟಿ ವ್ಯಾಪ್ತಿಯ ಸಿ.ಸಿ.ಎನ್. ಸರಕಾರಿ ಪ್ರೌಢಶಾಲೆಗೆ ಭೇಟಿ ನೀಡಿ ಮಕ್ಕಳ ದಾಖಲಾತಿ, ಬೋಧನಾ ಗುಣಮಟ್ಟ, ಶಾಲಾ ಶೌಚಾಲಯ, ಕುಡಿಯುವ ನೀರಿನ ಸೌಲಭ್ಯ, ಅಡುಗೆ ಕೋಣೆಗಳಿಗೆ ಭೇಟಿ ನೀಡಿ ಸ್ವಚ್ಛತೆಯನ್ನು ಅವಲೋಕಿಸಿದರು.

ನಂತರ ತಾಲೂಕಿನ ಬೆಳ್ಳಟ್ಟಿ ಗ್ರಾ.ಪಂ ವ್ಯಾಪ್ತಿಯ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಬಾಣಂತಿಯರ ದಾಖಲಾತಿ, ಹೊರ ರೋಗಿಗಳ ವಿಭಾಗ, ಲೇಬರ್ ವಿಭಾಗ, ಔಷಧಿ ವಿಭಾಗಗಳನ್ನು ಪರಿಶೀಲಿಸಿದರು. ಗ್ರಾಮದ ಸರಕಾರಿ ಪ್ರಾಢಶಾಲೆಗೆ ಭೇಟಿ ನೀಡಿ ಹಾಜರಾತಿ, ಬಿಸಿ ಊಟದ ಕೊಠಡಿ, ಭೋದನಾ ಗುಣಮಟ್ಟ, ಸಿಬ್ಬಂದಿಗಳ ಹಾಜರಾತಿ ಪರಿಶೀಲನೆ ಕೈಗೊಂಡರು.

ಇದೇ ವೇಳೆ ಅಡುಗೆ ಸಿಬ್ಬಂದಿಗಳೊಂದಿಗೆ ಮಾತನಾಡಿ, ಬಿಸಿಯೂಟಕ್ಕೆ ಬಳಸುವ ತರಕಾರಿ, ಮಕ್ಕಳಿಗೆ ವಿತರಿಸುವ ಮೊಟ್ಟೆ, ಬಾಳೆಹಣ್ಣಿನ ಬಗ್ಗೆ ಮಾಹಿತಿ ಪಡೆದರು. ಶಾಲಾ ಮಕ್ಕಳಿಗೆ ವಿತರಿಸಲಾಗುವ ಊಟದ ಕುರಿತು ಅಕ್ಷರ ದಾಸೋಹದ ಕೊಠಡಿಗಳಿಗೆ ಭೇಟಿ ನೀಡಿ ದವಸ ಧಾನ್ಯ, ತರಕಾರಿಗಳನ್ನು ಪರೀಕ್ಷಿಸಿದರು.

ಈ ಸಂದರ್ಭದಲ್ಲಿ ತಾ.ಪಂ ಇಓ ಆರ್.ವಿ. ದೊಡ್ಡಮನಿ, ಬಿಇಓ ಎಚ್.ಎನ್. ನಾಯಕ, ಆರ್‌ಎಫ್‌ಓ ರಾಮಪ್ಪ ಪೂಜಾರ, ಬೆಳ್ಳಟ್ಟಿ ಗ್ರಾ.ಪಂ ಅಧ್ಯಕ್ಷ ರಮೇಶ ನಿರ್ವಾಣಶೆಟ್ಟರ, ಸದಸ್ಯ ಶಿವನಗೌಡ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

### ವಿಶ್ವ ಪರಿಸರ ದಿನಾಚರಣೆಗೆ ಚಾಲನೆ ನೀಡಿದ ಯುವ ಮುಖಂಡ ಕೃಷ್ಣಗೌಡ ಪಾಟೀಲ

# ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆಗಾರಿಕೆಯಾಗಿದ್ದು, ನಾವಿಂದು ಬದ್ಧತೆಯಿಂದ ಪರಿಸರ ಸಂರಕ್ಷಣೆಗೆ ಮುಂದಾಗುವದು ಎಂದಿಗಿಂತ ಹೆಚ್ಚು ಅವಶ್ಯವಿದೆ ಎಂದು ಕಾಂಗ್ರೆಸ್‌ನ ಯುವ ಧುರೀಣ ಕೃಷ್ಣಗೌಡ ಪಾಟೀಲ ಹೇಳಿದರು.

ಅವರು ಗುರುವಾರ ಗದುಗಿನ ನಂದೀಶ್ವರ ನಗರದ 2 ಮತ್ತು 3ನೇ ಕ್ರಾಸ್ (ಇಂಡೋರ್ ಸ್ಟೇಡಿಯಂ ಬಡಾವಣೆ) ನಾಗರಿಕರ ವಿವಿಧೋದ್ದೇಶಗಳ ಸಂಘ ಏರ್ಪಡಿಸಿದ್ದ ವಿಶ್ವ ಪರಿಸರ ದಿನಾಚರಣೆಯ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಇಂದಿನ ಸಮಾಜಕ್ಕೆ ಪರಿಸರದ ಅವಶ್ಯಕತೆ ತುಂಬಾ ಇದೆ. ಇಂದು ವಾತಾವರಣ ಹಲವಾರು ಕಾರಣದಿಂದ ಕಲುಷಿತಗೊಂಡಿದೆ. ಈ ವಾತಾವರಣವನ್ನು ರಕ್ಷಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದ್ದು, ಮುಂದಿನ ಪೀಳಿಗೆಗೆ ಉತ್ತಮವಾದ ಪರಿಸರವನ್ನು ಕೊಡುಗೆ-ಯಾಗಿ ನೀಡಲು ನಾವೆಲ್ಲರೂ ಶ್ರಮಿಸೋಣ. ಈ ಬಡಾವಣೆಯಲ್ಲಿ ಸಚಿವರ ಹಾಗೂ ಪ್ರಾಧಿಕಾರದಿಂದ ಮಾದರಿ ಉದ್ಯಾನವನವನ್ನು ನಿರ್ಮಿಸಲು ಸಹಕಾರ ನೀಡುವ ಭರವಸೆ ನೀಡಿದರು.



ನಂದೀಶ್ವರ ನಗರದ ಬಡಾವಣೆಯ ಜಿಲ್ಲಾ ಗೌರವಾಧ್ಯಕ್ಷ ಜಿ.ಎಸ್. ಹಿರೇಮಠ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾ ಅಧ್ಯಕ್ಷ ಅಶೋಕ ಮಂದಾಲಿ, ನಗರಸಭೆ ಮಾಜಿ ಸದಸ್ಯ ಅನಿಲ್ ಗರಗ ಆಗಮಿಸಿದ್ದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ವಿಶ್ವನಾಥರೆಡ್ಡಿ ಗದ್ದಿಕೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಧಾನ ಕಾರ್ಯದರ್ಶಿ ಬಿ.ಎಚ್. ಕೊರ್ಲಹಳ್ಳಿ ನಿರೂಪಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ಇಂಡೋರ್ ಸ್ಟೇಡಿಯಂ ಬಡಾವಣೆಯ ಉಪಾಧ್ಯಕ್ಷ ಶಿವಾನಂದ ಪಲ್ಲೇದ, ರಾಚಯ್ಯ ಕರವೀರಮಠ ಎಸ್.ವೈ. ಯಾಳಗಿಶೆಟ್ರು, ಡಾ. ರವಿ ನಂದಿ, ಅಶೋಕ ಮಾಳೆಕೊಪ್ಪ, ಡಿ.ಬಿ. ಚೆನ್ನಶೆಟ್ಟಿ, ಹೊಳೆಯಪ್ಪಗೌಡ ಪಾಟೀಲ, ನಿಂಗರಾಜ ಗೊಲ್ಲರ, ಸಿದ್ದರಾಮೇಶ ಹಿರೇಮಠ, ನೀಲಕಂಠಯ್ಯ ಕಳ್ಳಿಮಠ, ವಿ.ಎಸ್. ಶಿವಕಾಳಿಮಠ, ಕೇಂಬ್ರಿಡ್ಜ್ ಶಾಲೆಯ ವಿದ್ಯಾರ್ಥಿಗಳು ಸೇರಿದಂತೆ ಬಡಾವಣೆಯ ಸದಸ್ಯರು, ಮಹಿಳೆಯರು, ಸಾರ್ವಜನಿಕರು ಭಾಗವಹಿಸಿದ್ದರು.

## ಸಂಪಾದಕೀಯ

# ಜಿಪಂ-ತಾಪಂ ಚುನಾವಣೆ: ಮೈತ್ರಿ ಪಕ್ಷಗಳ 'ಸ್ನೇಹಪರ ಕದನ'ದ ಇಂಗಿತ

ಕರ್ನಾಟಕದಲ್ಲಿ ಬಹುನಿರೀಕ್ಷಿತ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆಗಳು ಮೀಸಲಾತಿ ಗೊಂದಲದಿಂದ ವಿಳಂಬವಾಗಿವೆ. ಆದರೂ, ಆಡಳಿತಾರೂಢ ಕಾಂಗ್ರೆಸ್ ಹೊರತುಪಡಿಸಿ, ಲೋಕಸಭಾ ಚುನಾವಣೆಯಲ್ಲಿ ಮೈತ್ರಿ ಸಾಧಿಸಿ ಯಶಸ್ಸು ಕಂಡಿದ್ದ ಬಿಜೆಪಿ ಮತ್ತು ಜೆಡಿಎಸ್, ಈ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಪ್ರತ್ಯೇಕವಾಗಿ ಸ್ಪರ್ಧಿಸುವ ಇಂಗಿತ ವ್ಯಕ್ತಪಡಿಸಿವೆ.

ಈ ನಡೆ ಮೇಲ್ನೋಟಕ್ಕೆ ಮೈತ್ರಿಯಲ್ಲಿ ಬಿರುಕು ಮೂಡಿದೆ ಎಂದು ಅನಿಸಿದರೂ, ಇದು ತಳಮಟ್ಟದ ರಾಜಕಾರಣದ ಸೂಕ್ಷ್ಮತೆಯನ್ನು ಬಿಂಬಿಸುತ್ತದೆ. ಜಿಪಂ-ತಾಪಂ ಚುನಾವಣೆಗಳು ಸ್ಥಳೀಯ ನಾಯಕತ್ವ ಮತ್ತು ಪ್ರಾದೇಶಿಕ ಪ್ರಭಾವವನ್ನು ಆಧರಿಸಿದ್ದು, ಪಕ್ಷಗಳು ತಮ್ಮ ಕಾರ್ಯಕರ್ತರಿಗೆ ಅವಕಾಶ ಕಲ್ಪಿಸಲು ಪ್ರತ್ಯೇಕ ಸ್ಪರ್ಧೆಗೆ ಮುಂದಾಗಿವೆ.

ಒಂದೇ ಅಭ್ಯರ್ಥಿಯನ್ನು ಕಣಕ್ಕಿಳಿಸಿದರೆ, ಮತ್ತೊಂದು ಪಕ್ಷದ ಪ್ರಬಲ ಆಕಾಂಕ್ಷಿಗಳಿಗೆ ಅನ್ಯಾಯವಾಗುತ್ತದೆ.

ಜೆಡಿಎಸ್‌ನ ಹಿರಿಯ ನಾಯಕರೊಬ್ಬರು ಹೇಳಿರುವಂತೆ, ಇದು 'ಸ್ನೇಹಪರ ಹೋರಾಟ'ವಾಗಲಿದೆ. ಅಂದರೆ, ಚುನಾವಣೆಯಲ್ಲಿ ಪ್ರತ್ಯೇಕವಾಗಿ ಸ್ಪರ್ಧಿಸಿದರೂ, ಫಲಿತಾಂಶದ ನಂತರ ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆ ವೇಳೆ ಮೈತ್ರಿ ಮುಂದುವರಿಸುವ ಲೆಕ್ಕಾಚಾರವಿದೆ. ಇದು ಪಕ್ಷಗಳಿಗೆ ತಮ್ಮ ಸಂಘಟನಾ ಶಕ್ತಿಯನ್ನು ಪರೀಕ್ಷಿಸಲು ಮತ್ತು ತಳಮಟ್ಟದಲ್ಲಿ ತಮ್ಮ ಅಸ್ತಿತ್ವವನ್ನು ಉಳಿಸಿಕೊಳ್ಳಲು ನೆರವಾಗುತ್ತದೆ.

ಆದರೆ, ಪ್ರತ್ಯೇಕ ಸ್ಪರ್ಧೆ ಕೆಲವೊಮ್ಮೆ ಮತ ವಿಭಜನೆಗೆ ಕಾರಣವಾಗಿ ಮೂರನೇ ಪಕ್ಷಕ್ಕೆ ಲಾಭ ತಂದುಕೊಡುವ ಅಪಾಯವೂ ಇದೆ. ಮೀಸಲಾತಿ ಅಂತಿಮಗೊಂಡ ನಂತರವೇ ಈ ತಂತ್ರಗಾರಿಕೆಯ ನಿಜವಾದ ಪರಿಣಾಮಗಳು ಸ್ಪಷ್ಟವಾಗಲಿವೆ. ಈ ವಿಳಂಬಿತ ಚುನಾವಣೆ ಮತ್ತು ಮೈತ್ರಿ ಪಕ್ಷಗಳ ಈ ವಿಭಿನ್ನ ತಂತ್ರಗಾರಿಕೆ ರಾಜ್ಯ ರಾಜಕಾರಣದಲ್ಲಿ ಹೊಸ ಅಧ್ಯಾಯ ಬರೆಯುವುದಂತೂ ಖಚಿತ.

ಅನಧಿಕೃತ ಪ್ರಾಣಿ ಹತ್ಯೆ, ಸಾಗಾಣಿಕೆಗಳನ್ನು ತಡೆಗಟ್ಟುವ ಜಿಲ್ಲಾ ಸಮಿತಿ ಸಭೆಯಲ್ಲಿ ಡಿಸಿ ದಿವ್ಯ ಪ್ರಭು

# ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ

■ವಿಜಯಸಾಕ್ಷಿ ಸುದ್ದಿ, ಧಾರವಾಡ



ಜೂನ್ 7ರಂದು ಜಿಲ್ಲೆಯ ಸಾರ್ವಜನಿಕರು ಬಕ್ರೀದ್ ಹಬ್ಬವನ್ನು ಶಾಂತಿಯುತವಾಗಿ ಆಚರಿಸಬೇಕು. ಕರ್ನಾಟಕ ಜಾನುವಾರು ಹತ್ಯೆ, ಪ್ರತಿಬಂಧಕ ಮತ್ತು ಸಂರಕ್ಷಣಾ ಅಧಿನಿಯಮ-2020 ಪ್ರಕಾರ ನೋಂದಾಯಿತ ವಧಾಗಾರದಲ್ಲಿ ಮಾತ್ರ ಅನುಮತಿ ಇರುವ ಪ್ರಾಣಿಗಳನ್ನು ವಧೆ ಮಾಡಲು ಅವಕಾಶವಿದೆ. ಅನಧಿಕೃತ ಪ್ರಾಣಿ ವಧೆ ಹಾಗೂ ಮಾಂಸ ಸಾಗಾಣಿಕೆ ನಿಷೇಧಿಸಿದೆ ಎಂದು ಅನಧಿಕೃತ ಪ್ರಾಣಿ ಹತ್ಯೆ ಮತ್ತು ಸಾಗಾಣಿಕೆಗಳನ್ನು ತಡೆಗಟ್ಟುವ ಜಿಲ್ಲಾ ಸಮಿತಿ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಗುರುವಾರ ಸಂಜೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ಜಾನುವಾರು ಹತ್ಯೆ, ಪ್ರತಿಬಂಧಕ ಮತ್ತು ಸಂರಕ್ಷಣಾ ಅಧಿನಿಯಮ-2020ರ ಪರಿಣಾಮಕಾರಿ ಅನುಷ್ಠಾನ ಮತ್ತು ಅನಧಿಕೃತ ಪ್ರಾಣಿ ಹತ್ಯೆ ಮತ್ತು ಸಾಗಾಣಿಕೆಗಳನ್ನು ತಡೆಗಟ್ಟುವ ಜಿಲ್ಲಾ ಸಮಿತಿ ಸಭೆ ಜರುಗಿಸಿ ಮಾತನಾಡಿದರು.

ಕರ್ನಾಟಕ ಜಾನುವಾರು ಹತ್ಯೆ, ಪ್ರತಿಬಂಧಕ ಮತ್ತು ಸಂರಕ್ಷಣಾ ಅಧಿನಿಯಮ-2020ದ ಪ್ರಕಾರ 13 ವರ್ಷ ಮೇಲ್ಪಟ್ಟ ಎಮ್ಮೆ ಮತ್ತು ಕೋಣಗಳನ್ನು ಮಾತ್ರ ವಧೆ ಮಾಡಲು ಅವಕಾಶವಿದೆ. ಎತ್ತು, ಆಕಳು ಮತ್ತು ಕರು ಇವುಗಳನ್ನು ವಧೆ ಮಾಡಲು ಅವಕಾಶವಿರುವುದಿಲ್ಲ. ಈ ನಿಯಮವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಮತ್ತು ಅನಧಿಕೃತ ವಧಾಲಯಗಳನ್ನು ಗುರುತಿಸಿ, ಸೀಜ್ ಮಾಡಲು ಮತ್ತು ತಪ್ಪಿಸ್ಥರ ವಿರುದ್ಧ ಸೂಕ್ತ ಕಾನೂನು ಕ್ರಮಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು.

ಜಿಲ್ಲೆಯಲ್ಲಿ ಒಂದು ಸರ್ಕಾರಿ ಹಾಗೂ 10 ಖಾಸಗಿ ಗೋಶಾಲೆಗಳಿದ್ದು, ರಕ್ಷಿಸಿದ ಜಾನುವಾರುಗಳನ್ನು ಕಳುಹಿಸಬಹುದು. ಮಹಾನಗರ ಪಾಲಿಕೆ ಅಥವಾ ನಗರ ಸ್ಥಳೀಯ ಸಂಸ್ಥೆಗಳು ಜಾನುವಾರುಗಳ ಸಾಗಾಣಿಕೆಗೆ ವಾಹನ ವ್ಯವಸ್ಥೆಯನ್ನು ಮಾಡಬೇಕು. ಪೊಲೀಸ್ ಅಧಿಕಾರಿಗಳು ತಪ್ಪಿಸ್ಥರ ವಿರುದ್ಧ ಎಫ್.ಐ.ಆರ್ ದಾಖಲಿಸಿ, ಸೂಕ್ತ ಕ್ರಮ ಕೈಗೊಳ್ಳಬೇಕು. ಪಶು ಸಂಗೋಪನಾ ಇಲಾಖೆಯ ಅಧಿಕಾರಿಗಳು ಜಾನುವಾರುಗಳ ರಕ್ಷಣೆಗೆ ಅಗತ್ಯ ಕ್ರಮವಹಿಸಬೇಕು. ಈ ಎಲ್ಲ ಕ್ರಮಗಳನ್ನು ನಿಯಮಾನುಸಾರ ಕೈಗೊಳ್ಳಲು ಟಾಸ್ಕ್ ಪೋರ್ಸ್ ಸಮಿತಿಯ ಅಧ್ಯಕ್ಷರಾಗಿರುವ ತಹಸೀಲ್ದಾರರು ಸಮನ್ವಯದಿಂದ ಕರ್ತವ್ಯ ನಿರ್ವಹಿಸಬೇಕೆಂದು ಡಿ.ಸಿ ದಿವ್ಯ ಪ್ರಭು ಅವರು ಆದೇಶಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಬ್ಯಾಕೋಡ್ ಹಾಗೂ ಉಪ ಪೊಲೀಸ್ ಆಯುಕ್ತ ಮಹಾನಿಂಗ ನಂದಗಾಂವಿ ಮಾತನಾಡಿದರು. ಉಪನಿರ್ದೇಶಕರ ಕಚೇರಿಯ ಮುಖ್ಯ ಪಶುವೈದ್ಯಾಧಿಕಾರಿ ಡಾ. ಲಿಂಗರಾಜ ಬಿ.ಎಸ್. ಸ್ವಾಗತಿಸಿ, ಸಭೆ ನಿರ್ವಹಿಸಿದರು.

ಸಭೆಯಲ್ಲಿ ಜಿ.ಪಂ ಉಪಕಾರ್ಯದರ್ಶಿ ಬಿ.ಎಸ್. ಮೂಗನೂರಮಠ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಸಹಾಯಕ ಪೊಲೀಸ್ ಆಯುಕ್ತ ಪ್ರಶಾಂತ ಸಿದ್ದನಗೌಡರ, ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಮುಖ್ಯ ವೈದ್ಯಾಧಿಕಾರಿ ಡಾ. ಶ್ರೀಧರ ದಂಡೆಪ್ಪನವರ, ಪೊಲೀಸ್ ಇನ್ಸ್‌ಪೆಕ್ಟರ್‌ಗಳಾದ ದಯಾನಂದ ಶೆಗುಣಸಿ, ನಾಗಯ್ಯ ಕಾಡದೇವರಮಠ, ಎಲ್ಲ ತಾಲೂಕುಗಳ ತಹಸೀಲ್ದಾರರು, ಪಶು ಸಂಗೋಪನಾ ಇಲಾಖೆಯ ಅಧಿಕಾರಿಗಳು, ಜಿಲ್ಲೆಯ ವಿವಿಧ ನಗರ ಸ್ಥಳೀಯ ಸಂಸ್ಥೆಯ ಮುಖ್ಯಾಧಿಕಾರಿಗಳು ಉಪಸ್ಥಿತರಿದ್ದರು.

ಜಿಲ್ಲೆಯ ಮಹಾನಗರ, ಎಲ್ಲ ನಗರ ಪಟ್ಟಣಗಳ ಹಾಗೂ ಇತರ ಪ್ರದೇಶಗಳಲ್ಲಿ ಕರ್ನಾಟಕ ಜಾನುವಾರು ಹತ್ಯೆ, ಪ್ರತಿಬಂಧಕ ಮತ್ತು ಸಂರಕ್ಷಣಾ ಅಧಿನಿಯಮ-2020ರ ಉಲ್ಲಂಘನೆ ಆಗದಂತೆ ಮುಂಜಾಗ್ರತೆ ವಹಿಸಲು ಪ್ರತಿ ತಾಲೂಕಿಗೆ ಆಯಾ ತಹಸೀಲ್ದಾರ ಅಧ್ಯಕ್ಷತೆಯಲ್ಲಿ ಟಾಸ್ಕ್ ಪೋರ್ಸ್ ಸಮಿತಿಗಳನ್ನು ರಚಿಸಿ ಆದೇಶಿಸಲಾಗಿದೆ. ಪ್ರತಿ ಸಮಿತಿಯು ತಮ್ಮ ವ್ಯಾಪ್ತಿಯ ಪ್ರದೇಶಗಳಲ್ಲಿನ ಪ್ರಾಣಿ ವಧಾಲಯಗಳ ಬಗ್ಗೆ ಮಾಹಿತಿ ಪಡೆದು, ಪರಿಶೀಲಿಸಬೇಕು. ನೋಂದಣಿಯಾಗದೇ ಅನಧಿಕೃತವಾಗಿ ಪ್ರಾಣಿ ವಧಾಲಯ ಆರಂಭಿಸಿದ್ದಲ್ಲಿ ತಕ್ಷಣ ಸೀಜ್ ಮಾಡಿ, ಸೂಕ್ತ ಕಾನೂನು ಕ್ರಮಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ಡಿ.ದೇವರಾಜ ಅರಸು ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು- ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ, ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜೂನ್ 30 ಕೊನೆಯ ದಿನವಾಗಿದ್ದು, ಸೇವಾ ಸಿಂಧು ತಂತ್ರಾಂಶದ ಮುಖಾಂತರ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್ ಸೈಟ್ www.dbcdc.karnataka.gov.in ಅಥವಾ ಕಚೇರಿ ದೂರವಾಣಿ 08372-232327 ಇಲ್ಲಿ ಸಂಪರ್ಕಿಸಬಹುದಾಗಿದೆ.

# ವಿವಿಧ ಯೋಜನೆಗಳ ಸೌಲಭ್ಯಕ್ಕೆ ಅರ್ಜಿಗಳ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ಪಂಚವೃತ್ತಿ ಅಭಿವೃದ್ಧಿಗಾಗಿ ಆರ್ಥಿಕ ನೆರವು, ಸ್ವಯಂ ಉದ್ಯೋಗ, ನೇರ ಸಾಲ ಯೋಜನೆ, ಅರಿವು- ಶೈಕ್ಷಣಿಕ ನೇರಸಾಲ ಯೋಜನೆ ( ಹೊಸದು), ಅರಿವು - ಶೈಕ್ಷಣಿಕ ನೇರಸಾಲ ಯೋಜನೆ ( ನವೀಕರಣ), ಗಂಗಾ ಕಲ್ಯಾಣ ಯೋಜನೆ, ಸ್ವಯಂ ಉದ್ಯೋಗ ನೇರಸಾಲ, ಸ್ವಾವಲಂಬಿ ಸಾರಥಿ ಯೋಜನೆ, ವಿದೇಶಿ ವ್ಯಾಸಂಗ ಯೋಜನೆ, ಸ್ವಾತಂತ್ರ್ಯ ಅಮೃತ ಮುನ್ನಡೆ ಯೋಜನೆಗಳಡಿ ಸಹಾಯಧನ/ ಸಾಲ ಸೌಲಭ್ಯ ಪಡೆಯಲು ಆನ್‌ಲೈನ್

ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಈ ಯೋಜನೆಗಳಡಿ ಸಹಾಯಧನ/ಸಾಲ-ಸೌಲಭ್ಯವನ್ನು ಪಡೆಯಲು ಇಚ್ಛಿಸುವವರು ಕಡ್ಡಾಯವಾಗಿ ಆನ್‌ಲೈನ್ ಮೂಲಕ ಸೇವಾಸಿಂಧು ಪೋರ್ಟಲ್ ನಲ್ಲಿ ಅರ್ಜಿ ಸಲ್ಲಿಸಬೇಕಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನ ಜುಲೈ 2 ಆಗಿರುತ್ತದೆ. (ಶೈಕ್ಷಣಿಕ ಸಾಲ ಯೋಜನೆಗಳಿಗೆ ಕೊನೆ ದಿನಾಂಕ ಇರುವುದಿಲ್ಲ). ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. ನಿಗಮದ ಯೋಜನೆಗಳಲ್ಲಿ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವವರು ಸರ್ಕಾರದ ಆದೇಶದನ್ವಯ ವಿಶ್ವಕರ್ಮ ಸಮುದಾಯ ಹಾಗೂ ಅದರ ಉಪ ಜಾತಿಗಳಿಗೆ ಸೇರಿರಬೇಕು. ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯವಾಗಿರುತ್ತದೆ. ವಯೋಮಿತಿ 18 ವರ್ಷಗಳಿಂದ 55 ವರ್ಷಗಳ ಮಿತಿಯಲ್ಲಿರಬೇಕು. ನಿಗಮದ/ಸರ್ಕಾರದ ಯಾವುದಾದರೂ ಯೋಜನೆಗಳಡಿ ಈ ಹಿಂದೆ ಸೌಲಭ್ಯ ಪಡೆದಿರಬಾರದು. ಕುಟುಂಬದ ಒಬ್ಬರಿಗೆ ಮಾತ್ರ ಸೌಲಭ್ಯ ಒದಗಿಸಲಾಗುವುದು. ಅರಿವು ಯೋಜನೆಯಡಿ ವಯೋಮಿತಿ 18 ವರ್ಷಗಳಿಂದ 30 ವರ್ಷಗಳ ಮಿತಿಯಲ್ಲಿರಬೇಕು ವಾರ್ಷಿಕ ವರಮಾನ ರೂ.3.50/- ಲಕ್ಷಗಳು. ಸ್ವಾವಲಂಬಿ ಸಾರಥಿ ಯೋಜನೆಯಡಿ ಅರ್ಜಿದಾರರು 21 ವರ್ಷ ಮೇಲ್ಪಟ್ಟು 45 ವರ್ಷದ ಮಿತಿಯಲ್ಲಿರಬೇಕು. ಅರ್ಜಿದಾರರು ತಮ್ಮ ಮೊಬೈಲ್ ಸಂಖ್ಯೆಯನ್ನು ಹಾಗೂ ಬ್ಯಾಂಕ್ ಖಾತೆಯನ್ನು ತಮ್ಮ ಆಧಾರ್ ಸಂಖ್ಯೆಗೆ ಜೋಡಣೆ ಮಾಡಿರಬೇಕು. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ರೂ. 98,000/- ಮತ್ತು ನಗರ ಪ್ರದೇಶದವರಿಗೆ ರೂ. 1,20,000/-ಗಳ ಮಿತಿಯೊಳಗಿರಬೇಕು. ಆಯ್ಕೆ ಮಾಡುವಾಗ ಮಹಿಳೆಯರಿಗೆ 33%, ವಿಕಲಚೇತನರಿಗೆ 5% ಹಾಗೂ ತೃತೀಯ ಲಿಂಗಿಗಳಿಗೆ ಶೇ1% ಮೀಸಲಾತಿ ಇರಿಸಿದೆ.

2023-24 ಹಾಗೂ 2024-25ನೇ ಸಾಲಿನಲ್ಲಿ ಯೋಜನೆಗೆ ಅರ್ಜಿ ಸಲ್ಲಿಸಿರುವ ಅರ್ಜಿದಾರರು ಮತ್ತೊಮ್ಮೆ ಬೇರೆ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್: https://kvcdcl.karnataka.gov.in ರಲ್ಲಿ ಅಥವಾ ನಿಗಮದ ಕೇಂದ್ರ ಕಚೇರಿಯ ದೂರವಾಣಿ ಸಂಖ್ಯೆ 080-22374848/7899899039 ಯಿಂದ ಪಡೆಯಬಹುದಾಗಿದೆ. ಹಾಗೂ ಜಿಲ್ಲೆಗಳಲ್ಲಿ ನಿಗಮದ ಜಿಲ್ಲಾ ವ್ಯವಸ್ಥಾಪಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಕಚೇರಿ ಸಂ: 08372-232327 ನ್ನು ಪೂರ್ವಾಹ್ನ 10.00ರಿಂದ ಸಂಜೆ 5.30 ರವರೆಗೆ ಸಂಪರ್ಕಿಸಬಹುದಾಗಿದೆ.

# ವಿವಿಧ ಸೌಲಭ್ಯಗಳಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು- ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ, ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆಗಳ ಸೌಲಭ್ಯಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವ ಹಿಂದುಳಿದ ವರ್ಗಗಳ ಸವಿತಾ ಮತ್ತು ಅದರ ಉಪಜಾತಿಗಳಿಗೆ ಸೇರಿದ ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಆನ್ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿರುತ್ತದೆ. ನಿಗಮದ ವೆಬ್ಸೈಟ್ www.kssd.karnataka.gov.in ಇಲ್ಲಿ ಸಂಪರ್ಕಿಸಿ ಹೆಚ್ಚಿನ ಮಾಹಿತಿ ಪಡೆಯಬಹುದಾಗಿದೆ ಅಥವಾ ನಿಗಮದ ಸಹಾಯವಾಣಿ ಸಂಖ್ಯೆ:080-22374832 ಮತ್ತು 8050770004 ಅಥವಾ 8050770005 ಜಿಲ್ಲಾ ಕಚೇರಿಯ ದೂರವಾಣಿ 08372-232327 ಸಂಖ್ಯೆಗಳನ್ನು ಸಂಪರ್ಕಿಸಬಹುದು. ಸೇವಾಸಿಂಧು ತಂತ್ರಾಂಶದ ಮುಖಾಂತರ ಅರ್ಜಿ ಸಲ್ಲಿಸಲು ಜೂನ್ 30ಕೊನೆಯ ದಿನವಾಗಿದೆ.

ಕಳಕೊಣ್ಣವರ ಸರ್ಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಪರಿಸರ ದಿನಾಚರಣೆ

# ನೆಮ್ಮದಿಯ ಭವಿಷ್ಯಕ್ಕಾಗಿ ಪರಿಸರ ಉಳಿಸಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪರಿಸರವಿಲ್ಲದೆ ಮನುಷ್ಯ ಬದುಕಲಾರ. ಪರಿಸರದೊಂದಿಗೆ ಅವನದು ಅವಿನಾಭಾವ ಸಂಬಂಧ. ನಮ್ಮೆಲ್ಲರ ನೆಮ್ಮದಿಯ ಭವಿಷ್ಯಕ್ಕಾಗಿ ಎಲ್ಲರೂ ಪರಿಸರವನ್ನು ಉಳಿಸಿ, ಬೆಳೆಸುವ ಸಂಕಲ್ಪ ಮಾಡಬೇಕು ಎಂದು ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯ ಎಂ.ಎಸ್. ಧಡೆಸೂರಮಠ ಹೇಳಿದರು.

ನರೇಗಲ್ ಪಟ್ಟಣದ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಸರ್ಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಗುರುವಾರ ನಡೆದ ಪರಿಸರ ದಿನಾಚರಣೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ನಾವು ಪರಿಸರಕ್ಕೆ ಏನನ್ನು ಕೊಡುತ್ತೇವೆಯೋ ಅದೇ ನಮಗೆ ಮರಳಿ ಬರುವುದು. ಅಂದರೆ, ನಾವು ಪರಿಸರಕ್ಕೆ ಒಳಿತು ಮಾಡಿದರೆ ಪ್ರಕೃತಿಯು ನಮಗೊಲಿಯುತ್ತದೆ. ಕೇಡು ಬಯಸಿದರೆ, ಅದೇ ಪ್ರಕೃತಿಯ ರೌದ್ರಾವತಾರವನ್ನು ಕಾಣಬಹುದಾಗಿದ್ದು, ಆಯ್ಕೆ ನಮ್ಮದಾಗಿದೆ. ಅದಕ್ಕಾಗಿ ಪರಿಸರ ಕಾಪಾಡುವ ಕಾರ್ಯವಾಗಬೇಕಿದೆ ಎಂದರು. ಕಾಲೇಜು ಅಭಿವೃದ್ಧಿ ಸದಸ್ಯ ಹಾಗೂ ಕರವೇ ಜಿಲ್ಲಾ ಘಟಕದ ಅಧ್ಯಕ್ಷ ಹನಮಂತಪ್ಪ ಅಬ್ಬಿಗೇರಿ ಮಾತನಾಡಿ, ಕೃಷಿ, ಪರಿಸರವನ್ನು ಅರ್ಥ ಮಾಡಿಕೊಂಡು ಅದರ ಉಳಿವಿಗಾಗಿ ಎಲ್ಲರೂ ಕೈಜೋಡಿಸಿದಾಗ ಮಾತ್ರ ಮುಂದಿನ ದಿನಗಳಲ್ಲಿ ನೆಲ-ಜಲವನ್ನು ಸಂರಕ್ಷಣೆ ಮಾಡಲು ಸಾಧ್ಯ. ಭೂಮಿಯ ಪ್ರತಿಯೊಂದು ಘಟಕವೂ ಸಹ ಭೌತಿಕ ಪರಿಸರದ ಮೇಲೆ ಅವಲಂಬಿತವಾಗಿದೆ. ಆದ್ದರಿಂದ ಎಲ್ಲರೂ ಸಸಿ ನೆಡುವುದು, ನೆಟ್ಟ ಸಸಿಗಳನ್ನು ಪೋಷಿಸಿ ಬೆಳೆಸುವುದು ಹಾಗೂ ವಿದ್ಯಾರ್ಥಿಗಳು ಸುತ್ತಲಿನ ಪರಿಸರ ಸ್ವಚ್ಛವಾಗಿಟ್ಟುಕೊಳ್ಳುವಂತೆ ಎಲ್ಲರಲ್ಲೂ ಜಾಗೃತಿ ಮೂಡಿಸುವುದು ಅವಶ್ಯಕ ಎಂದರು.

ಪ್ರಾಂಶುಪಾಲ ಎಸ್.ಎಲ್. ಗುಳೇದಗುಡ್ಡ ಮಾತನಾಡಿ, ಬೀದಿಗಳಲ್ಲಿ ಪ್ಲಾಸ್ಟಿಕ್, ವಾಹನಗಳ ಅತಿಯಾದ ಬಳಕೆಯಿಂದಾಗಿ ಓಝೋನ್ ಪದರದಲ್ಲಿ ರಂಧ್ರವಾಗುತ್ತಿದ್ದು, ಸೂರ್ಯನ ನೇರಳಾತೀತ ಕಿರಣಗಳಿಂದ ಮನುಕುಲಕ್ಕೆ ಕಂಟಕ ಕಾದಿದೆ. ಹೀಗಾಗಿ ಪರಿಸರ ರಕ್ಷಣೆ ಎಲ್ಲರ ಜವಾಬ್ದಾರಿ ಎಂದರು.

ಕಾರ್ಯಕ್ರಮಕ್ಕೂ ಮೊದಲು ನಡೆದ ಸಿ.ಡಿ.ಸಿ ಸದಸ್ಯರ ಸಭೆಯಲ್ಲಿ ಕಾಲೇಜು ಪ್ರವೇಶಾತಿ ಹೆಚ್ಚಳ, ಮಕ್ಕಳ ಶೈಕ್ಷಣಿಕ ಪ್ರಗತಿ, ಸೌಕರ್ಯಗಳ ಕೊರತೆ, ವಾರ್ಷಿಕ ಸ್ನೇಹ ಸಮ್ಮೇಳನ ಕಾರ್ಯಕ್ರಮಗಳ ಕುರಿತು ಚರ್ಚಿಸಲಾಯಿತು. ಈ ವೇಳೆ ಕಾಲೇಜು ಅಭಿವೃದ್ಧಿ ಸದಸ್ಯರಾದ ಬಸೀರಾಬಾನು ಅಲ್ಲಾಬಕ್ಷಿ ನದಾಫ್, ಶರಣಪ್ಪ ಕುರಿ, ದಾವುದ್ ಅಲಿ ಕುದರಿ, ವೀರಪ್ಪ ಜಿರ್ಲ, ಆನಂದ ನಡುವಲಕೇರಿ, ಕಾಲೇಜಿನ ಸಿಬ್ಬಂದಿಗಳು ಇದ್ದರು.

# ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ನಿಜಶರಣ ಅಂಬಿಗರ ಚೌಡಯ್ಯ ಸಮಾಜ ಟ್ರಸ್ಟ್ ವತಿಯಿಂದ ಅಂಬಿಗ, ಗಂಗಾಮತ, ಬೆಸ್ತರ್, ಬಾರಕೇರ, ಸುಣಗಾರ ಸಮುದಾಯದ ವಿದ್ಯಾರ್ಥಿಗಳಿಗೆ ಉಚಿತ ನೋಟ್‌ಬುಕ್ ವಿತರಣೆ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಏರ್ಪಡಿಸಲಾಗಿತ್ತು.

ಮುಖ್ಯ ಅತಿಥಿಗಳಾಗಿ ಸಾಮಾಜಿಕ ಕಾರ್ಯಕರ್ತೆ, ಸಮುದಾಯದ ಚಿಂತಕರಾದ ಅಂಬಿಕಾ ಜಾಲಗಾರ ಪಾಲ್ಗೊಂಡು ಮಾತನಾಡಿ, ಮಕ್ಕಳ ಶಿಕ್ಷಣಕ್ಕೆ ಸಹಕಾರ ನೀಡುತ್ತಾ ಪ್ರತಿವರ್ಷ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ಮಾಡುತ್ತಿರುವ ಸಮಾಜ ಟ್ರಸ್ಟಿನ ಕಾರ್ಯ ವೈಖರಿ ಶ್ಲಾಘನೀಯ ಎಂದರು.

ಅಂತಾರಾಷ್ಟ್ರೀಯ ಓಲಂಪಿಕ್ ಕ್ರೀಡಾಪಟು ಹಾಗೂ ಸಮುದಾಯದ ಹಿರಿಯರಾದ ಬಿ. ಸುಣಗಾರ ನೋಟ್‌ಬುಕ್ ವಿತರಿಸಿ ಮಾತನಾಡಿ, ವಿದ್ಯಾರ್ಥಿಗಳು ಎಲ್ಲಾ ಕ್ಷೇತ್ರದಲ್ಲಿ ಸಾಧನೆ ಮಾಡಿ, ಸ್ಪರ್ಧಾತ್ಮಕ ಮನೋಭಾವ ಬೆಳೆಸಿಕೊಳ್ಳಿ ಎಂದರು.

ಸಮಾಜದ ಪ್ರಧಾನ ಕಾರ್ಯದರ್ಶಿ ಸಂಗಮೇಶ ಹಾದಿಮನಿ ಪ್ರಾಸ್ತಾವಿಕವಾಗಿ ಮಾತನಾಡಿ ಸ್ವಾಗತಿಸಿದರು. ಸಭೆಯ ಅಧ್ಯಕ್ಷತೆಯನ್ನು ಸಮಾಜದ ಜಿಲ್ಲಾಧ್ಯಕ್ಷ ರಾಮಣ್ಣ ಇರಕಲ್ಲ ವಹಿಸಿದ್ದರು. ಸಂದರ್ಭದಲ್ಲಿ ಗದಗ ಜಿಲ್ಲೆಯ ಕೆಪಿಸಿಸಿ ಮೀನುಗಾರರ ವಿಭಾಗದ ಜಿಲ್ಲಾಧ್ಯಕ್ಷ ಗುರಪ್ಪ ತಿರ್ಲಾಪುರ, ಸಮಾಜದ ಉಪಾಧ್ಯಕ್ಷ ಪ್ರವೀಣ ನೀಲಣ್ಣವರ, ಅಮಿತ ಪೂಜಾರ, ಹರೀಶ ಬಾರಕೇರ, ಸುಜಾತ ಗುಡಿಸಾಗರ, ಸೌಮ್ಯ ಸುಣಗಾರ, ಕವಿತಾ ಗುಡಿಸಾಗರ, ಚಂದ್ರಶೇಖರ ಬಾರಕೇರ, ಸಮಾಜ ಭಾಂದವರು ಉಪಸ್ಥಿತರಿದ್ದರು.

# ಬೇಷರತ್ ಗಾಝಾ ಕದನ ವಿರಾಮ ನಿರ್ಣಯಕ್ಕೆ ವಿಶ್ವಸಂಸ್ಥೆಯಲ್ಲಿ ಅಮೆರಿಕ ಮತ್ತೆ ವಿರೋಧ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ವಸಾಹತುಗಾರ ಇಸ್ರೇಲ್‌ನ ವಶದಲ್ಲಿರುವ ಪ್ಯಾಲೆಸ್ತೀನ್‌ನ ಗಾಝಾದಲ್ಲಿ "ತಕ್ಷಣದ, ಬೇಷರತ್ತಾದ ಮತ್ತು ಶಾಶ್ವತ ಕದನ ವಿರಾಮ"ಕ್ಕೆ ಕರೆ ನೀಡುವ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ನಿರ್ಣಯವನ್ನು ಅಮೆರಿಕ ಮತ್ತೆ ವಿರೋಧಿಸಿದೆ. ನಿರ್ಣಯದ ವಿರುದ್ಧ ತನ್ನ ವಿಶೇಷ ಅಧಿಕಾರ ವೀಟೊ ಬಳಸಿ ಅದನ್ನು ವಿರೋಧಿಸಿದ್ದು, ಅದಾಗ್ಯೂ, ಕೌನ್ಸಿಲ್‌ನಲ್ಲಿ ಉಳಿದ 14 ದೇಶಗಳು 'ಕದನ ವಿರಾಮ'ದ ಪರವಾಗಿ ಮತ ಚಲಾಯಿಸಿದವು.

ಗಾಝಾದಲ್ಲಿನ ಪರಿಸ್ಥಿತಿಯನ್ನು "ದುರಂತ" ಎಂದು ಕರೆದಿರುವ ಭದ್ರತಾ ಮಂಡಳಿಯ ನಿರ್ಣಯವು, "ಗಾಝಾಗೆ ಮಾನವೀಯ ನೆರವು ಪ್ರವೇಶದ ಮೇಲಿನ ಎಲ್ಲಾ ನಿರ್ಬಂಧಗಳನ್ನು ತಕ್ಷಣ ಮತ್ತು ಬೇಷರತ್ತಾಗಿ ತೆಗೆದುಹಾಕಬೇಕು. ಜೊತೆಗೆ ವಿಶ್ವಸಂಸ್ಥೆ ಮತ್ತು ಮಾನವೀಯ ಸಂಘಟನೆಗಳು ಅದರ ಸುರಕ್ಷಿತ ಮತ್ತು ಅಡೆತಡೆಯಿಲ್ಲದ ವಿತರಣೆ ಮಾಡಲು ಅವಕಾಶ ನೀಡಬೇಕು" ಎಂದು ಒತ್ತಾಯಿಸಿದೆ.

ಇಸ್ರೇಲ್ ಅನ್ನು ರಕ್ಷಿಸುವ ಸಲುವಾಗಿ ಭದ್ರತಾ ಮಂಡಳಿಯ ಕರಡು ಕದನ ವಿರಾಮ ನಿರ್ಣಯವನ್ನು ಅಮೆರಿಕ ವೀಟೊ ಮಾಡಿದ್ದು ಇದು ಐದನೇ ಬಾರಿಯಾಗಿದೆ.

ಕದನ ವಿರಾಮ ಬೇಡಿಕೆಯು ಹಮಾಸ್ ಹಿಡಿದಿಟ್ಟಿರುವ ಎಲ್ಲಾ ಒತ್ತೆಯಾಳುಗಳ ತಕ್ಷಣದ ಮತ್ತು ಬೇಷರತ್ತಾದ ಬಿಡುಗಡೆಗೆ ನೇರವಾಗಿ ಸಂಬಂಧಿಸಿಲ್ಲ ಎಂಬ ಆಧಾರದ ಮೇಲೆ ಬೈಡೆನ್ ಆಡಳಿತದ ಅಡಿಯಲ್ಲಿ ನವೆಂಬರ್‌ನಲ್ಲಿ ಕೂಡಾ ಅಮೆರಿಕ ಇದೇ ರೀತಿಯ ನಿರ್ಣಯವನ್ನು ವೀಟೊ ಮಾಡಿತು.

# ನಿವೃತ್ತ ಯೋಧನಿಗೆ ಭವ್ಯ ಸ್ವಾಗತ

■ವಿಜಯಸಾಕ್ಷಿ ಸುದ್ದಿ, ಗದಗ




ಸಮೀಪದ ತಿಮ್ಮಾಪೂರ ಗ್ರಾಮದ ಹೆಮ್ಮೆಯ ಸುಪುತ್ರ, ದೇವಪ್ಪ ಜೋಗಿನ ಭಾರತೀಯ ಸೇನೆಯಲ್ಲಿ 21 ವರ್ಷಗಳ ಕಾಲ ಸೇವೆ ಸಲ್ಲಿಸಿ ನಿವೃತ್ತಿ ನಂತರ ಮರಳಿ ತಾಯ್ನಾಡಿಗೆ ಆಗಮಿಸಿದ ಸಂದರ್ಭದಲ್ಲಿ ಗ್ರಾಮಸ್ಥರು ಹಾಗೂ ಗದಗ ಜಿಲ್ಲಾ ಮಾಜಿ ಸೈನಿಕರ ಸಂಘದಿಂದ ಭವ್ಯವಾಗಿ ಸ್ವಾಗತಿಸಲಾಯಿತು.

ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮೂಲಕ ಕ್ರಾಂತಿ ವೀರ ಸಂಗೊಳ್ಳಿ ರಾಯಣ್ಣ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿಗಳು, ಗ್ರಾಮಸ್ಥರು, ಮಾಜಿ ಸೈನಿಕರು ಕರೆತಂದಾಗ ಗ್ರಾಮದ ಮಹಿಳೆಯರು ಆರತಿ ಬೆಳಗಿ, ನಂತರ ಮಾರುತೇಶ್ವರ ದೇವಸ್ಥಾನಕ್ಕೆ ತೆರಳಿ ದೇವರಿಗೆ ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ, ಗದಗ ಜಿಲ್ಲಾ ಮಾಜಿ ಸೈನಿಕರ ಸಂಘದ ಅಧ್ಯಕ್ಷರಾದ ಬಸಲಿಂಗಪ್ಪ ಮುಂಡರಗಿ ನಿವೃತ್ತ ಯೋಧನನ್ನು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಕೆವಿಎಸ್‌ಆರ್ ಕಾಲೇಜಿನ ಪ್ರಾಂಶುಪಾಲ ಈರಣ್ಣ ಕಮತರ, ಉಪನ್ಯಾಸಕರಾದ ಶಾಂತಕುಮಾರ ಮಲ್ಲಾಪೂರ, ರಾಯಣ್ಣ ಕುರಡಗಿ, ಮಂಜುನಾಥ ತಳವಾರ, ಬಾಲಪ್ಪ ಜೋಗಿನ, ನಿಂಗಪ್ಪ ಹಂಚಿನಾಳ, ಮಾರುತಿ ಲಕ್ಕುಂಡಿ ಅಲ್ಲಿಸಾಬ ನದಾಫ್, ಕುಟುಂಬಸ್ಥರು ಪಾಲ್ಗೊಂಡಿದ್ದರು.

# ವಿಶ್ವ ಪರಿಸರ ದಿನ ಆಚರಣೆ




■ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ಬಿಂಕದಕಟ್ಟಿಯ ಶ್ರೀ ರಾಮಕರುಣಾನಂದ ಶಿಕ್ಷಣ ಸಂಸ್ಥೆಯ ಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಲೆಯ ಅಧ್ಯಕ್ಷ ವಿ.ಡಿ. ರಂಗಪ್ಪನವರು, ಪೋಷಕರಾದ ರಾಜೇಂದ್ರ ಮುಧೋಳ್, ರೇಣುಕಾ ಎಸ್.ಕೊಳ್ಳಿ, ಶಾಲೆಯ ಮುಖ್ಯೋಪಾಧ್ಯಾಯ ರಾಘವೇಂದ್ರ ಕೆ.ಆರ್ ಸಸಿಗಳನ್ನು ನೆಡುವ ಮೂಲಕ ಪರಿಸರ ದಿನಾಚರಣೆಯನ್ನು ಆಚರಿಸಿದರು. ಶಾಲೆಯ ಮಕ್ಕಳಿಂದ ಊರಿನ ಬೀದಿಗಳಲ್ಲಿ ಸಂಚರಿಸಿ ಪರಿಸರ ಸಂರಕ್ಷಣೆ ಬಗ್ಗೆ ಜಾಥಾ ನಡೆಸಲಾಯಿತು.

ಅಕ್ಕಮ್ಮ ಹರಿಜನ ಸ್ವಾಗತಿಸಿದರು. ಸಮೀನಾ ಕಾರ್ಯಕ್ರಮ ನಿರೂಪಿಸಿದರು. ನಾಗರತ್ನ ಮರೆಕರ್ ಪರಿಸರ ದಿನಾಚರಣೆಯ ಬಗ್ಗೆ ಮಕ್ಕಳಿಗೆ ತಿಳಿಸಿದರು. ಶ್ರುತಿ ಬ್ಯಾಹಟ್ಟಿ ವಂದಿಸಿದರು.

### ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದಿಂದ ದತ್ತಿ ಉಪನ್ಯಾಸ

# ಸೈಬರ್ ಕ್ರೈಂ ಬಗ್ಗೆ ಎಚ್ಚರಿಕೆಯಿರಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಬ್ಯಾಂಕುಗಳಲ್ಲಿ ಖಾತೆಯನ್ನು ಹೊಂದಿರಬೇಕು ಮತ್ತು ವ್ಯವಹಾರ ಮಾಡುತ್ತಾ ಸಾಗಿದಂತೆ ಬ್ಯಾಂಕಿನ ಜೊತೆಗೆ ಉತ್ತಮ ಬಾಂಧ್ಯವನ್ನು ಹೊಂದಬೇಕು. ಇದರಿಂದ ಸಾಲ ಸೌಲಭ್ಯಗಳನ್ನು ಪಡೆಯಲು ಸಾಧ್ಯವಾಗುತ್ತದೆ. ಪುರುಷರಿಗೆ ಎಷ್ಟು ಸಾಲ ಕೊಡುತ್ತೇವೆಯೋ, ಅಷ್ಟೇ ಸಾಲವನ್ನು ಮಹಿಳೆಯರಿಗೂ ನೀಡುತ್ತಿದ್ದೇವೆ ಎಂದು ಕರ್ನಾಟಕ ಗ್ರಾಮೀಣ ಬ್ಯಾಂಕ್‌ನ ಗದಗ ಸಿನಿಯರ್ ರೀಜಿನಲ್ ಮ್ಯಾನೇಜರ್ ಎ. ಪ್ರಕಾಶ ಹೇಳಿದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದಿಂದ ಹಮ್ಮಿಕೊಂಡ ಲಿಂ. ಶ್ರೀಮತಿ ಈರಮ್ಮ ಚಂದ್ರಶೇಖರಯ್ಯ ಧನ್ನೂರಹಿರೇಮಠ ಇವರ ದತ್ತಿ ಉಪನ್ಯಾಸದ ನಿಮಿತ್ತ ಮಹಿಳೆಯರ ಆರ್ಥಿಕ ಅಭಿವೃದ್ಧಿಯಲ್ಲಿ ಬ್ಯಾಂಕುಗಳ ಮಹತ್ವ ಹಾಗೂ ಸೈಬರ್ ಕ್ರೈಂ ಮಾಹಿತಿ ಕುರಿತ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.



ತಾಂತ್ರಿಕತೆ ಅಭಿವೃದ್ಧಿಯಾದಂತೆ ತೊಂದರೆಗಳು ಕೂಡಾ ಹೆಚ್ಚಾಗುತ್ತದೆ. ಈ ದೇಶದಲ್ಲಿ ಸೈಬರ್ ಅಪರಾಧ ಮಿತಿಮೀರಿ ನಡೆಯುತ್ತಿದೆ. ಅದಕ್ಕೆ ಸಾರ್ವಜನಿಕರು ಜಾಗೃತರಾಗಬೇಕು. ಯಾವುದೇ ಬ್ಯಾಂಕುಗಳು ತಮ್ಮ ವಯಕ್ತಿಕ ವಿವರಗಳನ್ನು ಯಾವುದೇ ಕಾರಣಕ್ಕೂ ಕೇಳುವುದಿಲ್ಲ. ಸೈಬರ್ ಕ್ರೈಂನಿಂದ ಒಮ್ಮೆ ಕಳೆದುಕೊಂಡ ಹಣ ಪುನಃ ಪಡೆಯಲು ಸಾಧ್ಯವಾಗುವುದಿಲ್ಲ. ಈ ನಿಟ್ಟಿನಲ್ಲಿ ಜಾಗೃತರಾಗಬೇಕೆಂದು ತಿಳಿಸಿದರು.


ಅತಿಥಿ ಉಪನ್ಯಾಸಕರಾದ ಎಸ್.ಬಿ.ಆಯ್. ಗದಗ ಎಫ್.ಆಯ್. ಮ್ಯಾನೇಜರ್ ಅನಂತ್ ಪ್ರಸಾದ ಮಾತನಾಡುತ್ತಾ, ಕೇಂದ್ರ ಹಾಗೂ ರಾಜ್ಯ ಸರ್ಕಾರವು ಮಹಿಳೆಯರಿಗೆ ಸಾಕಷ್ಟು ಯೋಜನೆಗಳನ್ನು ಜಾರಿಗೆ ತರುವ ಮೂಲಕ ಮಹಿಳೆಯರನ್ನು ಸ್ವಾಲಂಬಿಗಳನ್ನಾಗಿ ಮಾಡಲು ಶ್ರಮಿಸುತ್ತಿವೆ. ಬ್ಯಾಂಕುಗಳಲ್ಲಿ ವೈಯಕ್ತಿಕವಾಗಿ ಯಾವುದೇ ರೀತಿಯಿಂದ ದೂರವಾಣಿ ಮುಖಾಂತರ ಮಾಹಿತಿಯನ್ನು ಕೇಳುವುದಿಲ್ಲ. ಆದ್ದರಿಂದ ಮೊಬೈಲ್‌ನಲ್ಲಿ ಮಾಹಿತಿ ಬಗ್ಗೆ ಕರೆಗಳು ಬಂದರೆ, ಅವುಗಳಿಗೆ ಸ್ಪಂದಿಸಬಾರದು ಮತ್ತು ಮೊಬೈಲ್ ಲಿಂಕ್‌ಗಳಿಗೆ ತಮ್ಮ ವಿವರಗಳನ್ನು ಒದಗಿಸಬಾರದು. ಮೊಬೈಲ್ ಬಳಕೆಯನ್ನು ಅಗತ್ಯಕ್ಕೆ ತಕ್ಕಷ್ಟೇ ಸೀಮಿತಗೊಳಿಸುವುದು ಸೂಕ್ತ ಎಂದರು.

> ನಮ್ಮ ಬ್ಯಾಂಕ್‌ನಿಂದ ಬ್ಯೂಟಿಪಾರ್ಲರ್, ಕೋಳಿ ಸಾಕಾಣಿಕೆ, ಕುರಿ ಸಾಕಾಣಿಕೆ ಸೇರಿದಂತೆ ಸಣ್ಣ ಪ್ರಮಾಣದ ತರಬೇತಿಗಳನ್ನು ಕೂಡಾ ಕೊಡಿಸುತ್ತಿದ್ದೇವೆ. ತರಬೇತಿ ನಂತರ ಅವರಿಗೆ ಸ್ವಯಂ ಉದ್ಯೋಗ ಮಾಡಲು ಸಾಲ ಸೌಲಭ್ಯ ನೀಡಲಾಗುತ್ತದೆ. ಮಹಿಳೆಯರಿಗೆ ಸರ್ಕಾರವು ಸಾಕಷ್ಟು ಯೋಜನೆಗಳ ಜೊತೆಗೆ ಸೌಲಭ್ಯಗಳನ್ನು ಕೂಡಾ ತಂದಿದೆ ಎಂದು ಎ. ಪ್ರಕಾಶ ತಿಳಿಸಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಮಹಿಳಾ ಘಟಕದ ಅಧ್ಯಕ್ಷರಾದ ನಂದಾ ಚಂದ್ರು ಬಾಳಿಹಳ್ಳಿಮಠ ಮಾತನಾಡುತ್ತಾ, ಮಹಿಳೆಯರಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರವು ಸಾಕಷ್ಟು ಯೋಜನೆಗಳನ್ನು ತರುವುದರೊಂದಿಗೆ, ಕಡಿಮೆ ದರದಲ್ಲಿ ಸಾಲ ಸೌಲಭ್ಯ ಒದಗಿಸುತ್ತಿದೆ ಎಂದು ತಿಳಿಸಿದರು.

ಶಿವಲೀಲಾ ಹಿರೇಮಠ ಪ್ರಾರ್ಥಿಸಿದರೆ, ಮಹಿಳಾ ಘಟಕದ ಅಧ್ಯಕ್ಷರಾದ ನಂದಾ ಚಂದ್ರು ಬಾಳಿಹಳ್ಳಿಮಠ ಸ್ವಾಗತಿಸಿದರು. ಪ್ರಾಸ್ತಾವಿಕ ನುಡಿಯನ್ನು ಸಂಸ್ಥೆಯ ದತ್ತಿ ಉಪನ್ಯಾಸ ಉಪ ಸಮಿತಿ ಚೇರಮನ್ ಚಂದ್ರು ಬಾಳಿಹಳ್ಳಿಮಠ ನಡೆಸಿಕೊಟ್ಟರು. ಲಿಂಗಕ್ಯರಾದ ಮಹನೀಯರ ಕಿರು ಪರಿಚಯವನ್ನು ಮಹಿಳಾ ಘಟಕದ ಮಾಜಿ ಅಧ್ಯಕ್ಷರಾದ ಸುವರ್ಣಾ ಎಸ್.ಮದರಿಮಠ ಮಾಡಿದರು. ಜ್ಯೋತಿ ರಾಮನಗೌಡ ದಾನಪ್ಪಗೌಡ್ರ ಕಾರ್ಯಕ್ರಮ ನಿರೂಪಿಸಿದರು. ಸಂಸ್ಥೆಯ ಮಹಿಳಾ ಘಟಕದ ಉಪಾಧ್ಯಕ್ಷರಾದ ಸುಜಾತಾ ಎಸ್. ಗುಡಿಮನಿ ವಂದಿಸಿದರು.

# ಪ್ಲಾಸ್ಟಿಕ್ ನಿಷೇಧದಿಂದ ಪರಿಸರ ಸಂರಕ್ಷಣೆ



■ವಿಜಯಸಾಕ್ಷಿ ಸುದ್ದಿ, ಡಂಬಳ

ಜನರು ಪ್ಲಾಸ್ಟಿಕ್ ಬಳಕೆ ಕಡೆಗಣಿಸಿ, ಪರಿಸರ ಹಾಳು ಮಾಡುವುದನ್ನು ನಿಲ್ಲಿಸಿ, ಪ್ರಕೃತಿ ನಾಶಕ್ಕೆ ಕಡಿವಾಣ ಹಾಕಿ, ಹೆಚ್ಚು ಹೆಚ್ಚು ಗಿಡಗಳನ್ನು ಬೆಳೆಸಿ, ಮರಗಳನ್ನು ಉಳಿಸಿ ನಿಸರ್ಗ ದೇವತೆಯ ಒಡಲು ಹಸಿರಾಗುವಂತೆ ಪ್ರತಿಯೊಬ್ಬರೂ ನೋಡಿಕೊಳ್ಳಬೇಕಾಗಿದೆ ಎಂದು ಪ್ರಾಂಶುಪಾಲ ಪ್ರಕಾಶ ವಾಸುದೇವ ಇಮ್ಮಡಿ ಹೇಳಿದರು.

ಡಂಬಳ ಹೋಬಳಿಯ ಹಿರೇವಡ್ಡಟ್ಟಿ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಆವರಣದಲ್ಲಿ ಪರಿಸರ ದಿನಾಚರಣೆಯ ನಿಮಿತ್ತ ಗಿಡಗಳನ್ನು ನೆಟ್ಟು ಮಾತನಾಡಿದ ಅವರು, 1973ರಲ್ಲಿ ವಿಶ್ವಸಂಸ್ಥೆಯು ಮೊದಲ ಬಾರಿಗೆ ಪರಿಸರ ಸಂರಕ್ಷಣೆ ಬಗ್ಗೆ ಅರಿವು ಮೂಡಿಸುವ ಹಿತದೃಷ್ಟಿಯಿಂದ ವಿಶ್ವದಾದ್ಯಂತ ವಿಶ್ವ ಪರಿಸರ ದಿನ ಆಚರಿಸಲಾಯಿತು. ಪರಿಸರ ಸಂರಕ್ಷಣೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಹಾಗೂ ಪರಿಸರ ಹಾಳು ಮಾಡದಂತೆ ತಡೆಯುವುದು ವಿಶ್ವ ಪರಿಸರ ದಿನದ ಮೂಲ ಉದ್ದೇಶವಾಗಿದೆ ಎಂದು ತಿಳಿಸಿದರು.

ಬೆಲೆಬಾಳುವ ಶ್ರೀಗಂಧದ ಮರ, ರಕ್ತಚಂದನ, ಮಹಾಗನಿ, ರೋಸ್ ವುಡ್ ಮುಂತಾದ ಮರ ಬೆಳೆಸುವ ಮೂಲಕ ನಮ್ಮ ಆರ್ಥಿಕ ಅಭಿವೃದ್ಧಿಯ ಜೊತೆಗೆ ಆರೋಗ್ಯಕರ ಬದುಕು, ಆದರ್ಶದ ಬದುಕು ಮತ್ತು ಆಧ್ಯಾತ್ಮಿಕ ಬದುಕನ್ನು ಕಟ್ಟಿಕೊಳ್ಳಬಹುದು ಎಂದು ಹೇಳಿದರು. ಗುರುವೃಂದದ ಸುನಿತಾ ಎಚ್.ಎಮ್, ಸುರೇಖಾ ವಿ.ನಾವಿ, ಸುನಾಲಿ ಸಿ.ಕುಲಕರ್ಣಿ, ಬಸಮ್ಮ ವಿ. ನರೇಗಲ್ಲ, ರೇಷ್ಮಾ ದೊಂಗಡಿ, ಸುರೇಖಾ ಹೊಸಟ್ಟಿ, ಎಸ್.ಡಿ. ಲಮಾಣಿ, ರತ್ನಮ್ಮ ಜಿ.ಬಿ, ಅಶೋಕ ಪವಾಡಿ ಸೇರಿದಂತೆ ಸಿಬ್ಬಂದಿಗಳು, ವಿದ್ಯಾರ್ಥಿಗಳು ಇದ್ದರು.

### ತೆವಳುತ್ತ ಸಾಗಿರುವ ರಸ್ತೆ ಕಾಮಗಾರಿ: ರಸ್ತೆ ಧೂಳಿಗೆ ಹೈರಾಣಾದ ಜನತೆ

# ರಸ್ತೆ ಕಾಮಗಾರಿ ತಂದಿಟ್ಟ ಇಕ್ಕಟ್ಟು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಕೋಡಿಕೊಪ್ಪ ಸಂಪರ್ಕಿಸುವ ದ್ವಿಪಥ ರಸ್ತೆ ಕಾಮಗಾರಿ ಕುಂಟುತ್ತ ಸಾಗಿದ್ದು, ಕಾಮಗಾರಿಯಿಂದಾಗಿ ರಸ್ತೆಯ ಅಕ್ಕಪಕ್ಕದ ಮನೆಗಳು ಧೂಳಿನಿಂದ ಆವೃತ್ತವಾಗುತ್ತಿವೆ. ರಸ್ತೆಯಲ್ಲಿ ನಡೆದಾಡುವ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು, ವಾಹನ ಸವಾರರು ಧೂಳನ್ನೇ ಉಸಿರಾಡುವಂತಾಗಿದೆ. ಕಾಮಗಾರಿ ಗುತ್ತಿಗೆ ಪಡೆದುಕೊಂಡವರು ಸಮಸ್ಯೆ ಪರಿಹಾರಕ್ಕಾಗಿ ರಸ್ತೆಗೆ ನೀರು ಚಿಮುಕಿಸುವ ಕಾರ್ಯಕ್ಕೆ ಮುಂದಾಗಬೇಕಿತ್ತು. ಆದರೆ, ರಸ್ತೆಯನ್ನು ಅಗೆದು ಕೈಬಿಟ್ಟು ಕುಳಿತಿದ್ದಾರೆ ಎಂದು ಸಾರ್ವಜನಿಕರು ದೂರುತ್ತಿದ್ದಾರೆ.

ರಸ್ತೆಯಲ್ಲಿ ಸಂಗ್ರಹಗೊಳ್ಳುತ್ತಿರುವ ಮಣ್ಣಿನಿಂದಾಗಿ ರಸ್ತೆಗಳಲ್ಲಿ ವಾಹನ ವೇಗವಾಗಿ ಸಂಚರಿಸುತ್ತಿದ್ದಂತೆಯೇ ಧೂಳು ಮೇಲೇಳುತ್ತಿದೆ. ಇದರಿಂದಾಗಿ ವಾಹನ ಸವಾರರಷ್ಟೇ ಅಲ್ಲದೆ ರಸ್ತೆಯ ಇಕ್ಕೆಲಗಳ ವರ್ತಕರು, ನಿವಾಸಿಗಳು ನಾನಾ ರೀತಿಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ.



ಮಾರ್ಚ್ ಮೊದಲ ವಾರದಲ್ಲಿ ನರೇಗಲ್ಲ ಬಸ್ ನಿಲ್ದಾಣದಿಂದ ಕೋಡಿಕೊಪ್ಪ ಗ್ರಾಮದ ಶ್ರೀ ಅನ್ನದಾನೇಶ್ವರ ಕಾಲೋನಿವರೆಗಿನ ದ್ವಿಪಥ ರಸ್ತೆ ಕಾಮಗಾರಿಗೆ ಶಾಸಕ ಜಿ.ಎಸ್. ಪಾಟೀಲ ಚಾಲನೆ ನೀಡಿದ್ದರು. ಕಾಮಗಾರಿ ಪಡೆದ ಗುತ್ತಿಗೆದಾರರು ಮೂರು ತಿಂಗಳಾದರೂ ರಸ್ತೆಯ ಒಂದು ಬದಿಯನ್ನು ಕಿತ್ತು ಎಂ ಸ್ಯಾಂಡ್ ಮತ್ತು ಕಡಿಯನ್ನು ಹಾಕಿದ್ದಾರೆ. ಇದರಿಂದ, ಆ ರಸ್ತೆಯ ಮೂಲಕ ಭಾರೀ ವಾಹನಗಳು ಹಾಯ್ದು ಹೋಗುತ್ತಿದ್ದಂತೆ, ರಸ್ತೆಯಲ್ಲಿನ ಎಂ ಸ್ಯಾಂಡ್ ರಸ್ತೆಯನ್ನು ಧೂಳುಮಯ ಮಾಡುತ್ತಿದೆ. ಇದೇ ರಸ್ತೆಯ ಮೂಲಕ ಪ್ರತಿನಿತ್ಯ ಸರಕಾರಿ ಮತ್ತು ಖಾಸಗಿ ಶಾಲೆಯ ಸಾವಿರಾರು ವಿದ್ಯಾರ್ಥಿಗಳು ಸಾಗುತ್ತಿದ್ದು, ಕಣ್ಣು-ಮೂಗು ಮುಚ್ಚಿಕೊಂಡು ಹೋಗುವ ಸ್ಥಿತಿ ನಿರ್ಮಾಣವಾಗಿದೆ.

ಒಂದು ಬದಿಯ ರಸೆಯನ್ನು ಅಗೆದು ಎಂ ಸ್ಯಾಂಡ್ ಹಾಕಿದ ಪರಿಣಾಮ ಇನ್ನೊಂದು ಬದಿಯಲ್ಲಿ ವಾಹನಗಳು ಎದುರು ಬದುರು ಬರುತ್ತಿದ್ದು, ಸಂಚಾರ ಅಸ್ತವ್ಯಸ್ತವಾಗುತ್ತಿದೆ.

> ರಸ್ತೆ ಧೂಳಿನಿಂದಾಗಿ ಅನೇಕರು ಕೆಮ್ಮು, ಉಸಿರಾಟದ ಸಮಸ್ಯೆಗೂ ಸಿಲುಕಿದ್ದಾರೆ. ಕಳೆದೊಂದು ವಾರದಿಂದ ಮನೆಯ ಬಾಗಿಲು, ಕಿಟಕಿ ತೆಗೆಯದ ಸ್ಥಿತಿ ನಿರ್ಮಾಣವಾಗಿದೆ. ಮನೆಯ ಹೊರಗಡೆ ಬಟ್ಟೆಗಳನ್ನು ಹಾಕಿದರೆ ಕ್ಷಣ ಮಾತ್ರದಲ್ಲಿ ಧೂಳುಮಯವಾಗುತ್ತಿದೆ. ರಸ್ತೆ ಕಾಮಗಾರಿ ಮುಗಿಯುವವರೆಗೂ ರಸ್ತೆಗೆ ನೀರು ಚಿಮುಕಿಸಬೇಕು.
>
> **– ನಿಜಲಿಂಗಪ್ಪ ನಾಶಿಪುಡಿ.**
> ಕೋಡಿಕೊಪ್ಪ ನಿವಾಸಿ.

# ವಿವಿಧ ಸೌಲಭ್ಯಗಳಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತದಿಂದ 2025-26ನೇ ಸಾಲಿಗೆ ಅನುಷ್ಠಾನಗೊಳಿಸುತ್ತಿರುವ ನಿಗಮದ ಯೋಜನೆಗಳಿಗೆ ಸರ್ಕಾರದ ಆದೇಶದಲ್ಲಿನ ಪ್ರವರ್ಗ 1 ರ 6 (ಎ) ದಿಂದ 6 ಎಕೆ) ವರೆಗೆ ಬರುವ ಬೆಸ್ತ, ಅಂಬಿಗ/ ಅಂಬಿ, ಗಂಗಾಮತ, ಕಬ್ಬಲಿಗ, ಕೋಲಿ ಮತ್ತು ಇದರ ಉಪಜಾತಿಗಳ ಅಭಿವೃದ್ಧಿಗಾಗಿ 2024-25 ನೇ ಸಾಲಿನಲ್ಲಿ ಅರಿವು ಶೈಕ್ಷಣಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಸ್ವಯಂ ಉದ್ಯೋಗ ನೇರ ಸಾಲ ಮತ್ತು ಸಹಾಯಧನ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ ಈ ಯೋಜನೆಗಳ ಸೌಲಭ್ಯಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜುಲೈ 4 ಕೊನೆಯ ದಿನವಾಗಿದ್ದು, ( ಅರಿವು ಶೈಕ್ಷಣಿಕ ಸಾಲ ಯೋಜನೆಗಳಿಗೆ ಕೊನೆಯ ದಿನಾಂಕ ಇರುವುದಿಲ್ಲ),

ಹೆಚ್ಚಿನ ಮಾಹಿತಿಗಾಗಿ ಗ್ರಾಮ ಒನ್ / ಬೆಂಗಳೂರು ಒನ್/ ಕರ್ನಾಟಕ ಒನ್ ನಾಗರಿಕ ಸೇವಾ ಕೇಂದ್ರಗಳಲ್ಲಿ ಅಗತ್ಯ ದಾಖಲೆಗಳೊಂದಿಗೆ ಸೇವಾ ಸಿಂಧು ಪೋರ್ಟಲ್ ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿಗಮದ ಜಾಲತಾಣ http://ambigaradevelopment.karnataka.gov.in ಅಥವಾ ನಿಗಮದ ದೂರವಾಣಿ ಸಂಖ್ಯೆ 080-22864099 ಸಂಪರ್ಕಿಸಬಹುದಾಗಿದೆ.

# ವಿವಿಧ ಸೌಲಭ್ಯಗಳಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ


ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ಸ್ವಯಂ ಉದ್ಯೋಗ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು-ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ), , ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆಗಳ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಈ ಮೇಲ್ಕಂಡ ಎಲ್ಲಾ ಯೋಜನೆಗಳಡಿಯಲ್ಲಿ ಸೌಲಭ್ಯ ಒದಗಿಸಲು ಸೇವಾ ಸಿಂಧು ತಂತ್ರಾಂಶದಲ್ಲಿ ಆನ್ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್‌ನಲ್ಲಿರುವಂತೆ ಅರ್ಜಿದಾರರ ಹೆಸರು, ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದು ಹೊಂದಾಣಿಕೆಯಾಗಬೇಕು.

ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

2023-24 ಮತ್ತು 2024-25ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾಪೇಕ್ಷಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಚಿಸುವ ಹಿಂದುಳಿದ ವರ್ಗಗಳ ಪ್ರವರ್ಗ-2ಎಗೆ ಸೇರಿದ ಮಡಿವಾಳ ಮತ್ತು ಅದರ ಉಪಜಾತಿಗಳಿಗೆ ಸೇರಿದ ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಆನ್ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಜೂನ್ 30 ಕೊನೆಯ ದಿನವಾಗಿದ್ದು ನಿಗಮದ ವೆಬ್ ಸೈಟ್ www.kmmd.karnataka.gov.in ಇಲ್ಲಿ ಸಂಪರ್ಕಿಸಿ ಹೆಚ್ಚಿನ ಮಾಹಿತಿ ಪಡೆಯಬಹುದಾಗಿದೆ ಅಥವಾ ನಿಗಮದ ಸಹಾಯವಾಣಿ ಸಂಖ್ಯೆ:080-22374832 ಮತ್ತು 8050770004 ಅಥವಾ 8050770005 ಅಥವಾ ಜಿಲ್ಲಾ ಕಚೇರಿಯ ದೂರವಾಣಿ 08372-232327 ಸಂಖ್ಯೆಗಳನ್ನು ಸಂಪರ್ಕಿಸಬಹುದು.

# ಕೆ.ಎಲ್.ಇ ನಿರ್ದೇಶಕ ಮುನವಳ್ಳಿಯವರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯ ಮಾಜಿ ಅಧ್ಯಕ್ಷರು ಹಾಗೂ ಕೆ.ಎಲ್.ಇ ಸಂಸ್ಥೆಯ ನಿರ್ದೇಶಕರಾದ ಶಂಕ್ರಣ್ಣ ಈಶ್ವರಪ್ಪ ಮುನವಳ್ಳಿ ಇವರು 75ನೇ ವರ್ಷದ ಅಮೃತ ಮಹೋತ್ಸವವನ್ನು ಆಚರಿಸಿಕೊಂಡ ನಿಮಿತ್ತ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ತಾತನಗೌಡ ಎಸ್.ಪಾಟೀಲ ಇವರ ನಿಯೋಗದೊಂದಿಗೆ ಹುಬ್ಬಳ್ಳಿಯ ಅವರ ನಿವಾಸಕ್ಕೆ ಭೇಟಿ ನೀಡಿ ಸನ್ಮಾನಿಸಿ ಗೌರವಿಸಿದರು.

ಸಂಸ್ಥೆಯ ಉಪಾಧ್ಯಕ್ಷರಾದ ವಿಜಯಕುಮಾರ ಎಸ್.ಮಾಟಲದಿನ್ನಿ, ಎಸ್.ಆರ್. ನಾಲತ್ವಾಡಮಠ, ಸಹ ಗೌರವ ಕಾರ್ಯದರ್ಶಿ ಸೋಮನಾಥ ಕೆ.ಜಾಲಿ, ಮಾಜಿ ಅಧ್ಯಕ್ಷ ಎಚ್.ವ್ಹಿ. ಶಾನಭೋಗರ, ಈಶ್ವರಪ್ಪ ಸಿ.ಮುನವಳ್ಳಿ, ಶೇಖಣ್ಣ ಫ.ಗದ್ದಿಕೇರಿ ಉಪಸ್ಥಿತರಿದ್ದರೆಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಿಸರ ರಕ್ಷಣೆಗಾಗಿ ಜಾಗೃತರಾಗಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಬಿ.ಸಿ.ಎನ್ ಸ್ಪೆಕ್ಟ್ರಮ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಸಸಿಗಳನ್ನು ನೆಡುವುದರೊಂದಿಗೆ ಅರ್ಥಪೂರ್ಣವಾಗಿ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು. ಈ ವೇಳೆ ಮಾತನಾಡಿದ ಶಾಲೆಯ ಆಡಳಿತಾಧಿಕಾರಿ ನಾಗರಾಜ ಯಂಡಿಗೇರಿ, ಪ್ರಪಂಚದಲ್ಲಿನ ಎಲ್ಲ ಜೀವರಾಶಿಗಳ ರಕ್ಷಣೆ, ಪಾಲನೆ-ಪೋಷಣೆಯ ಜವಾಬ್ದಾರಿ ತನ್ನನೂ ಸೇರಿದಂತೆ ಮಾನವನ ಮೇಲಿದೆ. ಪ್ರಾಕೃತಿಕ ಸಮತೋಲನ ಕಾಯಲು ಪರಿಸರ ರಕ್ಷಣೆ ಅವಶ್ಯವಾಗಿದ್ದು, ಅದಕ್ಕಾಗಿ ಪ್ರತಿಯೊಬ್ಬರೂ ಜಾಗೃತರಾಗಲೇಬೇಕಾದ ಅನಿವಾರ್ಯತೆ ಇದೆ. ಮಗುವಿಗೊಂದು ಮರ ಕಾರ್ಯಕ್ರಮದ ಅಡಿಯಲ್ಲಿ ಶಾಲೆಯಲ್ಲಿನ ಪ್ರತಿಯೊಬ್ಬ ಮಗುವಿಗೂ ಸಸಿಗಳನ್ನು ವಿತರಿಸಿ ಅವುಗಳನ್ನು ನೀಡಲು ಸಲಹೆ ನೀಡಿದರು. ಮುಖ್ಯೋಪಾಧ್ಯಾಯ ವೀರೇಶ ಕಮ್ಮಾರ, ಶಿಕ್ಷಕರು, ಸಿಬ್ಬಂದಿ ಮತ್ತು ವಿದ್ಯಾರ್ಥಿಗಳಿದ್ದರು.

## ನಿಧನ

### ಮಮತಾಜಬೇಗಂ ಮದರಸಾಬ ನವಲಗುಂದ



**ಗದಗ:** ಅಣ್ಣಿಗೇರಿ ಪಟ್ಟಣದ ರೈಲ್ವೆ ಸ್ಟೇಷನ್ ಹತ್ತಿರದ ನಿವಾಸಿಯಾದ ಮಮತಾಜಬೇಗಂ ಮದರಸಾಬ್ ನವಲಗುಂದ ಇವರು ತಮ್ಮ 65ನೇ ವಯಸ್ಸಿನಲ್ಲಿ ನಿಧನ ಹೊಂದಿದ್ದಾರೆ. ಮೃತರು ಓರ್ವ ಪುತ್ರ, ಮೂರು ಜನ ಪುತ್ರಿಯರು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯ ಸ್ವಗ್ರಾಮವಾದ ಅಣ್ಣಿಗೇರಿಯ ಖಬರಸ್ಥಾನದಲ್ಲಿ ಜೂನ್ 5ರಂದು ಸಾಯಂಕಾಲ 6 ಗಂಟೆ ನೆರವೇರಿತು.

# ಪರಿಸರ ರಕ್ಷಣೆಯನ್ನು ನಿರ್ಲಕ್ಷಿಸದಿರಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮನುಷ್ಯ ಸೇರಿ ಜೀವ ಸಂಕುಲದ ರಕ್ಷಣಾ ಕವಚವಾಗಿ ಕಾರ್ಯ ನಿರ್ವಹಿಸುವ ಪರಿಸರದ ರಕ್ಷಣೆಯನ್ನು ನಿರ್ಲಕ್ಷಿಸಿದರೆ ಜೀವಕುಲ ಸಂಕಷ್ಟದ ಸುಳಿಗೆ ಸಿಲುಕುತ್ತದೆ ಎಂದು ಪಟ್ಟಣದ ವ್ಯಾಪಾರಸ್ಥರ ಸಂಘದ ಅಧ್ಯಕ್ಷ ಬಸವೇಶ ಮಹಾಂತಶೆಟ್ಟರ ಹೇಳಿದರು.

ಅವರು ಗುರುವಾರ ಪಟ್ಟಣದ ಸೋಮೇಶ್ವರ ದೇವಾಲಯದ ಆವರಣದಲ್ಲಿ ಸೋಮೇಶ್ವರ ದೇವಸ್ಥಾನ ಭಕ್ತರ ಕಮಿಟಿ, ಜೆಸಿಐ, ಭಾರತೀಯ ಕಿಸಾನ್ ಸಂಘ, ಇನ್ನರ್ ವ್ಹೀಲ್ ಕ್ಲಬ್‌ನ ಆಶ್ರಯದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಸಸಿ ನೆಡುವ ಕಾರ್ಯಕ್ರಮದಲ್ಲಿ ಮಾತನಾಡಿದರು.



ಈ ವೇಳೆ ಮಾತನಾಡಿದ ಸೋಮೇಶ್ವರ ದೇವಸ್ಥಾನ ಭಕ್ತರ ಕಮೀಟಿ ಅಧ್ಯಕ್ಷ ಗುರಣ್ಣ ಪಾಟೀಲಕುಲಕರ್ಣಿ, ಮನುಷ್ಯನ ಜೀವಸೆಲೆಯಾದ ಪರಿಸರ ರಕ್ಷಣೆ ಮತ್ತು ಪೋಷಣೆ ಮಾಡುವುದು ಅಗತ್ಯವಾಗಿದೆ. ತಂತ್ರಜ್ಞಾನ, ನಗರೀಕರಣದಿಂದ ಮರ ಕಡಿದು ನಾಡು ಕಟ್ಟುವುದರಿಂದ ಮನುಷ್ಯ ತನ್ನ ಅವನತಿಗೆ ತಾನೇ ಕಾರಣವಾಗುತ್ತಿದ್ದಾನೆ.

ಪರಿಸರ ಇದ್ದರೆ ನಲಿವು, ಇಲ್ಲದಿರೇ ಬರೀ ನೋವು. ಅದಕ್ಕಾಗಿ ಪರಿಸರ ರಕ್ಷಣೆಗೆ ನಾವೆಲ್ಲರೂ ಕೈಜೋಡಿಸಬೇಕು ಎಂದರು.

ಈ ಸಂದರ್ಭದಲ್ಲಿ ಇನ್ನರ್ ವ್ಹೀಲ್ ಕ್ಲಬ್‌ನ ಮಾಲಾದೇವಿ ದಂದರಗಿ, ಜೆಸಿಐನ ಲಕ್ಷ್ಮೀ ಹಂಗನಕಟ್ಟಿ ಮಾತನಾಡಿದರು. ಸುಲೋಚನಾ ಜವಾಯಿ, ಬಸವರಾಜ ಅರಳಿ, ರೈತ ಸಂಘದ ಟಾಕಪ್ಪ ಸಾತಪುತೆ, ಆಯ್.ಬಿ. ಜಕ್ಕನಗೌಡ್ರ, ರಾಘವೇಂದ್ರ ಪೂಜಾರ, ಮಂಜುಳಾ ಸತ್ಯಪ್ಪನವರ, ಡಾ. ಹೂವಿನ ಮುಂತಾದವರಿದ್ದರು.

# ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮದಿಂದ 2025-26 ನೇ ಸಾಲಿನಲ್ಲಿ ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವ ವಿದ್ಯಾಲಯಗಳಲ್ಲಿ ಉನ್ನತ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ, ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆ, ಈ ಯೋಜನೆಗಳ ಸೌಲಭ್ಯಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಗಳ ಸೌಲಭ್ಯ ಪಡೆಯಲು ಇಚ್ಛಿಸುವ ಹಿಂದುಳಿದ ವರ್ಗಗಳ ಪ್ರವರ್ಗ-1 ರ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗಕ್ಕೆ ಅರ್ಜಿದಾರರು ಅರ್ಜಿಗಳನ್ನು ಸೇವಾ ಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್, ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ನಿಗಮದ ವೆಬ್ ಸೈಟ್ www.kaad.karnataka.gov.in ಇಲ್ಲಿ ಸಂಪರ್ಕಿಸಿ ಹೆಚ್ಚಿನ ಮಾಹಿತಿ ಪಡೆಯಬಹುದಾಗಿದೆ. ಅಥವಾ ನಿಗಮದ ಸಹಾಯವಾಣಿ ಸಂಖ್ಯೆ 080-22374832 ಮತ್ತು 8050770004 ಅಥವಾ 8050770005 ಅಥವಾ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ 08372-232327 ಸಂಪರ್ಕಿಸಬಹುದಾಗಿದೆ.

ಅರ್ಜಿ ಸಲ್ಲಿಸಲು ಜೂನ್ 30 ಕೊನೆಯ ದಿನವಾಗಿದೆ ಎಂದು ಜಿಲ್ಲಾ ವ್ಯವಸ್ಥಾಪಕರು ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮ ಗದಗ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾ ಕಸಾಪ ವತಿಯಿಂದ ನಾಲ್ವಡಿ ಕೃಷ್ಣರಾಜ ಒಡೆಯರ ಜಯಂತಿ ಆಚರಣೆ

# ನಾಲ್ವಡಿ ಕೃಷ್ಣರಾಜರು ಜನಪರ ಅರಸರು

■ ವಿಜಯಸಾಕ್ಷಿ ಸುದ್ದಿ, ಗದಗ

ನಾಲ್ವಡಿ ಕೃಷ್ಣರಾಜ ಒಡೆಯರ್ ಆಡಳಿತಾವಧಿಯಲ್ಲಿ ಸಮಾಜದ ಸರ್ವತೋಮುಖ ಅಭಿವೃದ್ಧಿಗೆ ಪೂರಕವಾದ ಕಾರ್ಯಗಳು ಜರುಗಿ ಜನಪರ ಅರಸನಾಗಿ ಜನಮಾನಸದಲ್ಲಿ ನೆಲೆ ನಿಂತರು. ಕೃಷಿ, ಶಿಕ್ಷಣ ಮತ್ತು ಕೈಗಾರಿಕೆಗಳ ಅಭಿವೃದ್ಧಿಯ ಹಿನ್ನೆಲೆಯ ಮಹತ್ವದ ಕಾರ್ಯಯೋಜನೆಗಳನ್ನು ರೂಪಿಸಿ, ಜಾರಿಗೊಳಿಸಿದರು. ಐಷಾರಾಮಿ ಬದುಕನ್ನು ತೊರೆದು ಜನಮುಖಿ ಕಾರ್ಯ ಮಾಡಿದ ನಾಲ್ವಡಿ ಅರಸರು ಸದಾ ಸ್ಮರಣೀಯರು. ಕನ್ನಡ ನಾಡು-ನುಡಿಗೆ ನಾಲ್ವಡಿ ಕೃಷ್ಣರಾಜ ಒಡೆಯರ ಕೊಡುಗೆ ಅಪಾರ ಎಂದು ಶಿರಹಟ್ಟಿಯ ಸರಕಾರಿ ಪದವಿಪೂರ್ವ ಮಹಾವಿದ್ಯಾಲಯ ಪ್ರಾಚಾರ್ಯ ಬಿ.ಜಿ. ಗಿರಿತಿಮ್ಮಣ್ಣವರ ಅಭಿಪ್ರಾಯಪಟ್ಟರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಏರ್ಪಡಿಸಿದ್ದ ಕನ್ನಡ ಸಾಹಿತ್ಯ




ಪರಿಷತ್ತಿನ ಸಂಸ್ಥಾಪಕ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ 141ನೇ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಕೃಷ್ಣರಾಜ ಒಡೆಯರ ಕೊಡುಗೆ ಕುರಿತು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಕೆ.ವಿ.ಎಸ್.ಆರ್. ಮಹಾವಿದ್ಯಾಲಯದ ಪ್ರಾಚಾರ್ಯ ವಿ.ಎಸ್. ದಲಾಲಿ ಮಾತನಾಡಿ, ಆಡಳಿತದಲ್ಲಿ ಜನರ ಸಹಭಾಗಿತ್ವ ಇರಬೇಕು ಎಂಬ ಉದೇಶದಿಂದ ಮೈಸೂರು ಸಂಸ್ಥಾನದಲ್ಲಿ ಚಾಮರಾಜ ಒಡೆಯರ ಕಾಲದಲ್ಲಿ ಪ್ರಜಾ ಪ್ರತಿನಿಧಿ ಸಭೆ ಪ್ರಾರಂಭಗೊಂಡಿತು. ನಾಲ್ವಡಿ ಕಾಲದಲ್ಲಿ ಇದು ವಿಸ್ತಾರವಾಗಿ ಬೆಳೆಯಿತು. ಶಿಕ್ಷಣ ಇಲ್ಲದೆ ಯಾವುದೇ ಸಮಸ್ಯೆಗಳನ್ನು ಪರಿಹರಿಸಲು ಸಾಧ್ಯವಿಲ್ಲ ಎಂಬ ಸತ್ಯವನ್ನು ನಾಲ್ವಡಿ ಕೃಷ್ಣರಾಜರು ಕಂಡುಕೊಂಡಿದ್ದರು. ಈ ಕಾರಣಕ್ಕಾಗಿ ಪ್ರಾಥಮಿಕ ಶಿಕ್ಷಣದಿಂದ ಉನ್ನತ ಶಿಕ್ಷಣದವರೆಗೆ ಅವರು ಹೆಚ್ಚಿನ ಒತ್ತು ನೀಡಿದರು. ಉಚಿತ ಶಿಕ್ಷಣ ಪ್ರಾರಂಭಿಸಿದರು. ಕನ್ನಡ ನಾಡಿನಲ್ಲಿ ಕನ್ನಡ ಭಾಷೆ, ಕನ್ನಡ ನೆಲ-ನುಡಿಯ ಹಿರಿಮೆಯನ್ನು ಎತ್ತಿ ಹಿಡಿಯಲು ಕನ್ನಡ ಸಾಹಿತ್ಯ ಪರಿಷತ್ತಿನಂತಹ ಸಂಸ್ಥೆ ಬೇಕು ಎನ್ನುವ ಚಿಂತನೆ ಮಾಡಿ ಸ್ಥಾಪಿಸಿದ ಸಂಸ್ಥೆ ಒಂದು ಶತಮಾನ ಕಂಡು ಕನ್ನಡಿಗರ ಹೆಮ್ಮೆಯ ದ್ಯೋತಕವಾಗಿದೆ. 38 ವರ್ಷಗಳ ಕಾಲ ದಕ್ಷ ಆಡಳಿತ ನಡೆಸಿ 'ರಾಜರ್ಷಿ' ಬಿರುದಿಗೆ ಪಾತ್ರರಾದರು ಎಂದು ತಿಳಿಸಿದರು.

ಡಿ.ಎಸ್. ಬಾಪುರಿ ಸ್ವಾಗತಿಸಿದರು. ಜಿಲ್ಲಾ ಗೌರವ ಕಾರ್ಯದರ್ಶಿ ಕಿಶೋರಬಾಬು ನಾಗರಕಟ್ಟಿ ನಿರೂಪಿಸಿದರು. ರಾಹುಲ ಗಿಡ್ನಂದಿ ವಂದಿಸಿದರು.

ಕಾರ್ಯಕ್ರಮದಲ್ಲಿ ಪ್ರಾ. ಚಂದ್ರಶೇಖರ ವಸ್ತ್ರದ, ಕೆ.ಎಚ್. ಬೇಲೂರ, ಐ.ಕೆ. ಕಮ್ಮಾರ, ಅಶೋಕ ಬರಗುಂಡಿ, ಪ್ರ.ತೋ. ನಾರಾಯಣಪುರ, ಬಿ.ಎಸ್. ಹಿಂಡಿ, ಬಿ.ಬಿ. ಹೊಳಗುಂದಿ, ಸತೀಶ ಚನ್ನಪ್ಪಗೌಡ್ರ, ರಾಜಶೇಖರ ಕರಡಿ, ಸಿದ್ಧಲಿಂಗೇಶ ಸಜ್ಜನಶೆಟ್ಟರ, ಆರ್.ಡಿ. ಕಪ್ಪಲಿ, ರತ್ನಕ್ಕ ಪಾಟೀಲ, ಎಸ್.ಎಮ್. ಕಾತರಕಿ, ಬಸವರಾಜ ಗಣಪ್ಪನವರ, ಅಮರೇಶ ರಾಂಪೂರ ಉಪಸ್ಥಿತರಿದ್ದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ನಾಲ್ವಡಿ ಕೃಷ್ಣರಾಜ ಒಡೆಯರು ಅನೇಕ ಪ್ರಥಮಗಳಿಗೆ ಕಾರಣರಾಗಿದ್ದಾರೆ. ರೈತರು ಬದಕನ್ನು ಹಸನಾಗಿಸಲು ಕೃಷ್ಣರಾಜ ಜಲಾಶಯವನ್ನು ನಿರ್ಮಾಣ ಮಾಡಿದರು. ವಿದ್ಯುಚ್ಛಕ್ತಿ ಉತ್ಪಾದನೆ, ಶೈಕ್ಷಣಿಕ ಸಂಸ್ಥೆಗಳ ಸ್ಥಾಪನೆ, ಉದ್ಯಮಗಳ ಸ್ಥಾಪನೆ ಮೂಲಕ ಸಮಾಜವನ್ನು ಆರ್ಥಿಕವಾಗಿ, ಶೈಕ್ಷಣಿಕವಾಗಿ ಹಾಗೂ ಸಾಮಾಜಿಕವಾಗಿ ಉನ್ನತೀಕರಿಸಲು ಶ್ರಮಿಸಿದರು. ಗ್ರಂಥಕರ್ತರ ನೆರವಿಗಾಗಿ, ಕನ್ನಡ ನಾಡು-ನುಡಿಯ ಬೆಳವಣಿಗೆಗಾಗಿ ಕನ್ನಡ ಸಾಹಿತ್ಯ ಪರಿಷತ್ತನ್ನು ಸ್ಥಾಪಿಸಿ ಕನ್ನಡದ ಸೇವೆಯನ್ನು ಮಾಡಿದರು ಎಂದು ತಿಳಿಸಿದರು.

# ಸಿಎಂ ಸಿದ್ದರಾಮಯ್ಯರಿಗೆ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಹುಬ್ಬಳ್ಳಿ ರಸ್ತೆಯ ಜಿಲ್ಲಾಧಿಕಾರಿ ಕಚೇರಿ ಎದುರಿನ ಜಿ-ಎನ್‌ಟಿಟಿಎಫ್ ಆವರಣದಲ್ಲಿ ದಿ. ಗದಗ ಕೋ-ಆಪ್ ಇಂಡಸ್ಟ್ರಿಯಲ್ ಎಸ್ಟೇಟ್ ಲಿ. ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಜಿ-ಎನ್‌ಟಿಟಿಎಫ್‌ನ ಉದ್ಘಾಟನಾ ಸಮಾರಂಭದಲ್ಲಿ ಜಿ-ಎನ್‌ಟಿಟಿಎಫ್‌ನ ಚೆರಮನ್ ಕೃಷ್ಣಗೌಡ ಎಚ್.ಪಾಟೀಲ ಅವರು ಸಿಎಂ ಸಿದ್ದರಾಮಯ್ಯರನ್ನು ಸನ್ಮಾನಿಸಿದರು.

ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರು ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಎನ್‌ಟಿಟಿಎಫ್ ಎಂಡಿ



ರವಿ ಟೆನ್ನೆಟಿ, ಅತಿಥಿಗಳಾಗಿ ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಸರ್ಕಾರಿ ಮುಖ್ಯ ಸಚೇತಕ ಹಾಗೂ ವಿಧಾನ ಪರಿಷತ್ ಸದಸ್ಯ ಸಲೀಂ ಅಹ್ಮದ್, ಶಾಸಕರಾದ ಬಸವರಾಜ ಶಿವಣ್ಣನವರ, ಎನ್.ಎಚ್. ಕೋನರಡ್ಡಿ, ಮಾಜಿ ಶಾಸಕರಾದ ಬಿ.ಆರ್. ಯಾವಗಲ್, ಡಿ.ಆರ್. ಪಾಟೀಲ, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ಜಿ.ಪಂ ಮಾಜಿ ಅಧ್ಯಕ್ಷೆ ಸುಜಾತಾ ದೊಡ್ಡಮನಿ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಗದಗ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಜಿಸಿಐಇ ಅಧ್ಯಕ್ಷ ಆರ್.ಆರ್. ಓದುಗೌಡರ, ಉಪಾಧ್ಯಕ್ಷ ಪಿ.ಬಿ. ದಂಡಾವತಿಮಠ ಸೇರಿ ಆಡಳಿತ ಮಂಡಳಿ ಸದಸ್ಯರು ಹಾಗೂ ಉದ್ಯಮಿಗಳು ಪಾಲ್ಗೊಂಡಿದ್ದರು.

# ಯುವಕರ ಸಾವಿಗೆ ರಾಜ್ಯ ಸರ್ಕಾರವೇ ಹೊಣೆ

■ ವಿಜಯಸಾಕ್ಷಿ ಸುದ್ದಿ, ಗದಗ

18 ವರ್ಷಗಳ ಬಳಿಕ ಐಪಿಎಲ್ ಗೆದ್ದ ಆರ್‌ಸಿಬಿ ತಂಡಕ್ಕೆ ಸಿಕ್ಕ ಜನರ ಪ್ರೀತಿಗೆ ಎಲ್ಲರ ಮನಸೋತ್ತಿದ್ದು ನಿಜ. ಈ ಪ್ರೀತಿ ಹಾಗೂ ಉತ್ಸಾಹವನ್ನು ನೋಡಿ ಸಿಎಂ ಹಾಗೂ ಡಿಸಿಎಂ ಇದರಲ್ಲಿ ತಮ್ಮ ಬೇಳೆ ಬೇಯಿಸಿಕೊಳ್ಳಲು ಹೋಗಿ 11 ಯುವಕರನ್ನು ಬಲಿ ಪಡೆದಿದ್ದಾರೆ ಎಂದು ಜೆಡಿಎಸ್ ಪಕ್ಷದ ರಾಜ್ಯ ವಕ್ತಾರ ವೆಂಕನಗೌಡ ಆರ್.ಗೋವಿಂದಗೌಡ್ರ ರಾಜ್ಯ ಸರ್ಕಾರದ ಬೇಜವಾಬ್ದಾರಿಯನ್ನು ತೀವ್ರವಾಗಿ ಖಂಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ವಿಧಾನಸೌಧದ ಮುಂದೆ ಆರ್‌ಸಿಬಿ ತಂಡದ ಆಟಗಾರರಿಗೆ ಸನ್ಮಾನ ಕಾರ್ಯಕ್ರಮ



ರಾಜ್ಯ ಸರ್ಕಾರದಿಂದ ಏರ್ಪಟ್ಟಿತ್ತು. ಇದರ ಶ್ರೇಯಸ್ಸು ಮುಖ್ಯಮಂತ್ರಿಗಳಿಗೆ ಹೋಗಿದೆ ಎಂದು ಉಪಮುಖ್ಯಮಂತ್ರಿಗಳು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಎಲ್ಲರಿಗೂ ಉಚಿತ ಪ್ರವೇಶವೆಂದು ಘೋಷಣೆ ಮಾಡಿ ಕೇವಲ ಮೂರೇ ಗೇಟುಗಳನ್ನು ತೆ-ರೆದು ಈ ಅವಘಡಕ್ಕೆ ಕಾರಣರಾಗಿದ್ದಾರೆ. ಅದರ ಕ್ರೆಡಿಟ್ ಪಡೆಯಲು ಹೋಗಿ ಎಲ್ಲಾ ಅವಾಂತರಗಳಿಗೆ ಕಾರಣರಾಗಿದ್ದಾರೆ. ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗಡೆ ಇಷ್ಟು ದೊಡ್ಡ ದುರಂತ ನಡೆದರೂ ಕೂಡ ರಾಜ್ಯದ ಉಪ ಮುಖ್ಯಮಂತ್ರಿಗಳು ಪ್ರಚಾರ ಗಿಟ್ಟಿಸಿಕೊಳ್ಳುವಲ್ಲಿ ಮಗ್ನರಾಗಿದ್ದರು ಎಂದು ಈ ನಡವಳಿಕೆಯನ್ನು ಕಟುವಾಗಿ ಟೀಕಿಸಿದ್ದಾರೆ.

ರಾಜ್ಯ ವಕ್ತಾರರ ಈ ಹೇಳಿಕೆಯನ್ನು ಬಸವರಾಜ ಅಪ್ಪಣ್ಣವರ, ಎಂ.ಎಸ್. ಪಾರ್ವತಗೌಡ್ರ, ರಮೇಶ ಹುನಸಿಮರದ, ಸಂತೋಷ ಪಾಟೀಲ, ಪ್ರಫುಲ್ಲ ಪುನೀಕರ, ಪುಲಿಕೇಶಿ ಗಾಲಿ, ಜಿ.ಕೆ. ಕೊಳ್ಳಿಮಠ, ಮಂಜುಳಾ ಮೇಟಿ, ಸಿದ್ದಲಿಂಗಯ್ಯ ಹೊಂಬಾಳೆಮಠ, ಶರಣಪ್ಪ ಹೂಗಾರ, ಕಲ್ಲುಸಾ ಸಿಂಗ್ರಿ ಸಮರ್ಥಿಸಿದ್ದಾರೆ.

### ಜಿಲ್ಲಾ ಮಟ್ಟದ ತನಿಖಾ ಸಮಿತಿಯ ಪದಾಧಿಕಾರಿಗಳ ಆಯ್ಕೆ

# ಸದಸ್ಯರಾಗಿ ವೀಣಾ ಕಟ್ನಳ್ಳಿ ನೇಮಕ

■ ವಿಜಯಸಾಕ್ಷಿ ಸುದ್ದಿ, ಗದಗ

ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ಪೋಷಣೆ) ಕಾಯ್ದೆ 2015 ಹಾಗೂ ಬಾಲನ್ಯಾಯ ಮಾದರಿ ನಿಯಮಗಳ 2016ರ ಅನ್ವಯ ಜಿಲ್ಲಾ ಮಟ್ಟದ ತನಿಖಾ ಸಮಿತಿಯ ಸದಸ್ಯರನ್ನಾಗಿ ವೀಣಾ ಕಟ್ನಳ್ಳಿ ಅವರನ್ನು ನೇಮಕ ಮಾಡಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿ ಅಧ್ಯಕ್ಷ ಸಿ.ಎನ್. ಶ್ರೀಧರ್ ಆದೇಶಿದ್ದಾರೆ.

ರಾಜ್ಯದಲ್ಲಿ ಮಕ್ಕಳ ಪಾಲನಾ ಸಂಸ್ಥೆಗಳು ಬಾಲನ್ಯಾಯ ಕಾಯ್ದೆಯನ್ವಯ ಮಿಷನ್ ವಾತ್ಸಲ್ಯ ಯೋಜನೆಯಡಿ ಕಾರ್ಯನಿರ್ವಹಿಸುತ್ತಿವೆ. ಸಂಕಷ್ಟ ಪರಿಸ್ಥಿತಿಯಲ್ಲಿರುವ ಮಕ್ಕಳ ಪಾಲನೆ, ಸಂರಕ್ಷಣೆ ಹಾಗೂ ಪುನರ್ವಸತಿ ಕಲ್ಪಿಸುವುದು ಇಲಾಖೆಯ ಉದ್ದೇಶವಾಗಿದೆ. ಆದ್ದರಿಂದ ಬಾಲನಾಯ ಮಾದರಿ ನಿಯಮಗಳು 2016 ತಿದ್ದುಪಡಿ 2022ರ ನಿಯಮ 41(1) ಮತ್ತು (8)ರಲ್ಲಿ ಜಿಲ್ಲಾ ಮಟ್ಟದ ತನಿಖಾ ಸಮಿತಿಯನ್ನು ರಚಿಸಲಾಗಿದೆ.

ಅಪರ ಜಿಲ್ಲಾಧಿಕಾರಿಗಳನ್ನು ಅಧ್ಯಕ್ಷರನ್ನಾಗಿ, ಮಕ್ಕಳ ಕಲ್ಯಾಣ



ಸಮಿತಿ ಅಧ್ಯಕ್ಷೆ ಜಯಶ್ರೀ ಕವಲೂರು ಅವರನ್ನು ಸಮಿತಿ ಸದಸ್ಯರನ್ನಾಗಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಯನ್ನು ಸದಸ್ಯ ಕಾರ್ಯದರ್ಶಿಯನ್ನಾಗಿ, ಚಂದ್ರಕಾಂತ ಚವ್ಹಾಣ, ಮಾನಸಿಕ ಆರೋಗ್ಯ ತಜ್ಞೆ ಡಾ. ವರ್ಷಾ ಅಂಘಡಿ ಅವರನ್ನು ಸದಸ್ಯರನ್ನಾಗಿ ಹಾಗೂ ವೀಣಾ ಕಟ್ನಳ್ಳಿ ಅವರನ್ನು ಸದಸ್ಯರನ್ನಾಗಿ ನೇಮಕ ಮಾಡಲಾಗಿದೆ.

ಸಮಿತಿ ಸದಸ್ಯರು ಜಿಲ್ಲಾ ತನಿಖಾ ಸಮಿತಿಯು ಜಿಲ್ಲೆಯಲ್ಲಿನ ಮಕ್ಕಳ ಪಾಲನಾ ಸಂಸ್ಥೆಗಳಿಗೆ ಭೇಟಿ ನೀಡಿ ನಮೂನೆ-46ರಲ್ಲಿ ವರದಿ ಸಲ್ಲಿಸುವುದು, ಖಾಸಗಿ ಮತ್ತು ಸರ್ಕಾರಿ ಪಾಲನಾ ಸಂಸ್ಥೆಗಳನ್ನು ಒಳಗೊಂಡಂತೆ ಪ್ರವಾಸದ ವೇಳಾಪಟ್ಟಿಯನ್ನು ಯೋಜಿಸಿ ಗರಿಷ್ಠ 3 ತಿಂಗಳಲ್ಲಿ ಜಿಲ್ಲೆಯ ಎಲ್ಲಾ ಮಕ್ಕಳ ಪಾಲನಾ ಸಂಸ್ಥೆಗಳ ಪರಿಶೀಲನೆ ನಡೆಸುವುದು, ಜಿಲ್ಲಾ ತನಿಖಾ ಸಮಿತಿಯು ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015 ತಿದ್ದುಪಡಿ 2021, ಮಾದರಿ ನಿಯಮಗಳು 2016 ತಿದ್ದುಪಡಿ 2022 ರನ್ವಯ ಮಕ್ಕಳ ಪಾಲನಾ ಸಂಸ್ಥೆಗಳಿಗೆ ಭೇಟಿ ನೀಡಿದ ಸಮಯದಲ್ಲಿ ಗಮನಿಸಿದ ಅಂಶಗಳು ಹಾಗೂ ಅದನ್ನು ಉತ್ತಮಪಡಿಸಲು ಸಲಹೆಗಳನ್ನು ಜಿಲ್ಲಾಧಿಕಾರಿಗಳಿಗೆ ಮತ್ತು ನಿರ್ದೇಶನಾಲಯಕ್ಕೆ ವರದಿ ಮಾಡುವುದು, ಜಿಲ್ಲಾ ತನಿಖಾ ಸಮಿತಿಯು ಮಕ್ಕಳ ಪಾಲನಾ ಸಂಸ್ಥೆಗಳಿಗೆ ಭೇಟಿ ನೀಡಿದ ಸಮಯದಲ್ಲಿ ಮಕ್ಕಳೊಂದಿಗೆ ಅವರ ಯೋಗ ಕ್ಷೇಮದ ಬಗ್ಗೆ ಸಂವಹನ ನಡೆಸಿ ಅವರ ಪ್ರತಿಕ್ರಿಯೆಯನ್ನು ನಮೂದಿಸುವುದು ಹಾಗೂ ಜಿಲ್ಲಾ ವ್ಯಾಪ್ತಿಯಲ್ಲಿ ಮಕ್ಕಳ ಪಾಲನಾ ಸಂಸ್ಥೆಗಳ ಕಾರ್ಯನಿರ್ವಹಣೆ ಹಾಗೂ ಸುಧಾರಣೆಗೆ ತೆಗೆದುಕೊಂಡಿರುವ ಕ್ರಮದ ಕುರಿತು ವರದಿಯನ್ನು ಈ ಕಾರ್ಯಾಲಯ ಮೂಲಕ ರಾಜ್ಯ ಸರ್ಕಾರಕ್ಕೆ ಪ್ರತಿ ವರ್ಷವೂ ಸಲ್ಲಿಸುವುದಾಗಿದೆ.

# ಕುಂಭಮೇಳ ವ್ಯವಸ್ಥೆಯನ್ನು ಟೀಕಿಸಿದವರ ಬಣ್ಣ ಬಯಲಾಗಿದೆ; ವಿಜಯಕುಮಾರ ಗಡ್ಡಿ



■ ವಿಜಯಸಾಕ್ಷಿ ಸುದ್ದಿ, ಗದಗ

ಕೆಲವು ತಿಂಗಳುಗಳ ಹಿಂದೆ ಪ್ರಯಾಗ್‌ರಾಜ್ ನಲ್ಲಿ ಜರುಗಿದ ಮಹಾಕುಂಭಮೇಳ ಸಮಯದಲ್ಲಿ ಕೇಂದ್ರ ಸರ್ಕಾರವನ್ನು ಟೀಕಿಸಿದ್ದ ಕಾಂಗ್ರೆಸ್ಸಿಗರ ಬಣ್ಣ ಈಗ ಬಯಲಾಗಿದ್ದು, ಬೆಂಗಳೂರಿನಲ್ಲಿ ಇತ್ತೀಚೆಗೆ ಜರುಗಿದ ಆರ್.ಸಿ.ಬಿ ಸಂಭ್ರಮೋತ್ಸವದಲ್ಲಿ ಅಭಿಮಾನಿಗಳ ಸಾವಿಗೆ ರಾಜ್ಯ ಕಾಂಗ್ರೆಸ್ ಸರ್ಕಾರವೇ ನೇರ ಕಾರಣ ಎಂದು ಬಿಜೆಪಿ ಮುಖಂಡರಾದ ವಿಜಯಕುಮಾರ ಗಡ್ಡಿ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಮಹಾಕುಂಭಮೇಳ ಸಂದರ್ಭದಲ್ಲಿ ದಿನನಿತ್ಯ ಲಕ್ಷಾಂತರ ಭಕ್ತರು ಹರಿದು ಬರುತ್ತಿದ್ದರೂ ಸಹ ಯೋಗಿ ಸರ್ಕಾರ ಅತ್ಯುತ್ತಮವಾದ ವ್ಯವಸ್ಥೆಯನ್ನು ಸಂಘಟಿಸಿತ್ತು ಆದಾಗ್ಯೂ ಕಾಂಗ್ರೆಸ್ಸಿಗರು ಯೋಗಿ ಸರ್ಕಾರವನ್ನು ಖಂಡಿಸಿದ್ದರು. ಸದ್ಯ ಆರ್.ಸಿ.ಬಿ ತಂಡದ ವಿಜಯೋತ್ಸವನ್ನು ತರಾತುರಿಯಲ್ಲಿ ಸಂಘಟಿಸಿ ಅಲ್ಲಿ ಹಠಾತ್ ಕಾಲ್ತುಳಿತ ಉಂಟಾಗಿ 10ಕ್ಕೂ ಹೆಚ್ಚು ಜನರು ಪ್ರಾಣ ಕಳೆದುಕೊಂಡಿದ್ದಾರೆ. ಮಹಾಕುಂಭಮೇಳ ಸಂದರ್ಭದಲ್ಲಿ 45 ದಿನಗಳ ಕಾಲ 60 ಕೋಟಿಗೂ ಅಧಿಕ ಭಕ್ತರು ಪ್ರಯಾಗ್‌ರಾಜ್‌ಗೆ ಧಾವಿಸಿದ್ದಾರೆ, ಇಲ್ಲಿ ಉತ್ತರ ಪ್ರದೇಶ ಸರ್ಕಾರ ನಿರ್ವಹಿಸಿದ ರಕ್ಷಣಾ ವ್ಯವಸ್ಥೆ ನಿಜಕ್ಕೂ ಮಾದರಿಯಾಗಿದೆ. ಆದರೆ ಇಲ್ಲಿ ಕಾಂಗ್ರೆಸ್ ಸರ್ಕಾರ ಕೆಲವೇ ಗಂಟೆಗಳಲ್ಲಿ ಒಂದಿಷ್ಟು ಸಾವಿರ ಅಭಿಮಾನಿಗಳನ್ನು ನಿಯಂತ್ರಣ ಮಾಡಲು ಸೋತಿದೆ. ಇಂಥ ಅನಾಹುತಕ್ಕೆ ಕಾರಣವಾಗುವ ಮೂಲಕ ಕಾಂಗ್ರೆಸ್ ಸರ್ಕಾರ ಆರ್.ಸಿ.ಬಿ ತಂಡದ ಜಯಕ್ಕೂ ಕಪ್ಪು ಚುಕ್ಕೆ ಇಟ್ಟಿದ್ದು, ಮುಖ್ಯಮಂತ್ರಿಗಳು ಸೇರಿದಂತೆ ಸಚಿವ ಸಂಪುಟ ನಿಜಕ್ಕೂ ತಲೆ ತಗ್ಗಿಸಲೇಬೇಕಾದ ಸಂಗತಿ ಇದಾಗಿದೆ ಎಂದಿರುವ ಅವರು, ಆರ್ ಸಿ ಬಿ ಸಂಭ್ರಮಾಚರಣೆಯಲ್ಲಿ ಮಡಿದ ಅಭಿಮಾನಿಗಳಿಗೆ ಶ್ರದ್ಧಾಂಜಲಿ ಸಲ್ಲಿಸಿದ್ದಾರೆ .

# ಗಂಗಾ ಮಾತೆ ಮೋಕ್ಷದಾತೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಗಂಗಾಮತ ಸಮಾಜ ಬಾಂಧವರಿಂದ ಗುರುವಾರ ಗಂಗಾಮಾತಾ ಜಯಂತ್ಯುತ್ಸವವನ್ನು ಶೃದ್ಧಾ ಭಕ್ತಿಯಿಂದ ಆಚರಿಸಲಾಯಿತು.

ಬೆಳಿಗ್ಗೆ ಪಟ್ಟಣದ ಪುರಸಭೆ ಹತ್ತಿರದ ಸುಣಗಾರ ಓಣಿಯ ಗಂಗಾದೇವಿ ದೇವಸ್ಥಾನದಲ್ಲಿ ಮಹಿಳೆಯರಿಗೆ ಉಡಿ ತುಂಬುವ ಕಾರ್ಯಕ್ರಮ, ಬಳಿಕ ಗಂಗಾದೇವಿ ಭಾವಚಿತ್ರದ ಮೆರವಣಿಗೆ ಪೂರ್ಣಕುಂಭ ಮತ್ತು ವಾದ್ಯಗಳ ಸಮೇತ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ನೆರವೇರಿತು.

ಮೆರವಣಿಗೆಗೆ ಗಂಗಾದೇವಿಯ ಭಾವಚಿತ್ರಕ್ಕೆ ಪುಷ್ಪಗಳನ್ನು ಅರ್ಪಿಸುವ ಮೂಲಕ ಚಾಲನೆ ನೀಡಿ ಮಾತನಾಡಿದ ಪುರಸಭೆ ಮಾಜಿ ಅಧ್ಯಕ್ಷೆ ಹಾಗೂ ಹಾಲಿ ಸದಸ್ಯೆ ಅಶ್ವಿನಿ ಅಂಕಲಕೋಟಿ, ಭಗೀರಥನ ತಪಸ್ಸಿಗೆ ಮೆಚ್ಚಿದ ಗಂಗಾ ಮಾತೆ ಭೂಲೋಕದ ಸಕಲ ಚರಾಚರಗಳಿಗೂ ಆಶ್ರಯದಾತೆ ಮತ್ತು ಸಕಲ ಜೀವರಾಶಿಗಳಿಗೆ ಉಸಿರಾದ ದಿನವೆಂದು ಗಂಗಾಮಾತಾ ಜಯಂತಿ ಆಚರಿಸಲಾಗುತ್ತದೆ.

ಪವಿತ್ರ ಗಂಗಾಮಾತೆ ಜೀವಿಗಳಿಗೆ ಜೀವಜಲ, ಪಾಪ-ಕರ್ಮ, ಕಲ್ಮಷಗಳನ್ನೆಲ್ಲ ತೊಳೆದುಹಾಕಿ ಮೋಕ್ಷ ಕರುಣಿಸುವ ಮಹಾತಾಯಿಯಾಗಿದ್ದಾಳೆ ಎಂದರು.

ಈ ಸಂದರ್ಭದಲ್ಲಿ ಶಿವಯೋಗಿ ಅಂಕಲಕೋಟಿ, ಸಮಾಜದ ಅಧ್ಯಕ್ಷ ಬರಮಪ್ಪ ಕಟ್ಟಿಮನಿ, ಮಹಾದೇವಪ್ಪ ಕಟ್ಟಿಮನಿ, ಸೋಮಪ್ಪ ಸುಣಗಾರ, ಗಂಗಾಧರ ತಂಡಿಗೇರ, ಮಹಾಂತೇಶ ಶಿಗ್ಲಿ, ಬಾಲೇಹೊಸೂರಿನ ಗುಡದಯ್ಯ ಬಾರಕಿ, ಮಹಾಂತೇಶ ಸುಣಗಾರ, ಹನುಮಂತಪ್ಪ ಸುಣಗಾರ, ಮಾಲತೇಶ ತಂಡಿಗೇರ, ಕಿರಣ್ ಕಟ್ಟಿಮನಿ, ಆಕಾಶ ಸವದತ್ತಿ, ಪುಟ್ಟಪ್ಪ ಹೊಸೂರಿ, ಯಲ್ಲಪ್ಪ ಜಾಲಗಾರ ಸೇರಿದಂತೆ ಅನೇಕರಿದ್ದರು.

# ಸನ್ಮಾರ್ಗ ಮಹಾವಿದ್ಯಾಲಯದಲ್ಲಿ ಪರಿಸರ ದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ಹಾಗೂ ನಮ್ಮ ಮುಂದಿನ ಜನಾಂಗದ ನೆಮ್ಮದಿಯುತ ಬದು-ಕಿಗೆ ಪರಿಸರ ಮೂಲಭೂತ ಸಂಪತ್ತಾಗಿದ್ದು, ಪರಿಸರವನ್ನು ಉಳಿಸಿ-ಬೆಳೆಸುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಬೇಕು ಎಂದು ಸನ್ಮಾರ್ಗ ಕಾಲೇಜಿನ ಪ್ರಾಚಾರ್ಯರಾದ ಪ್ರೊ. ಪ್ರೇಮಾನಂದ ರೋಣದ ನುಡಿದರು. ಅವರು ಗುರುವಾರ ನಗರದ ಸ್ಟುಡೆಂಟ್ಸ್ ಎಜುಕೇಶನ್ ಸೊಸೈಟಿಯ ಸನ್ಮಾರ್ಗ ಕಾಲೇಜಿನಲ್ಲಿ ಆಯೋಜಿಸಲಾದ ಪರಿಸರ



ದಿನಾಚರಣೆ ಕಾರ್ಯಕ್ರಮದಲ್ಲಿ ಸಸಿ ನೆಟ್ಟು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು.

ನಮ್ಮ ದೇಹ ಪ್ರಕೃತಿಯ ಪಂಚಭೂತಗಳಿಂದ ನಿರ್ಮಾಣವಾಗಿದ್ದು, ನಿಸರ್ಗವನ್ನು ಹೊರತುಪಡಿಸಿ ಜೀವನವನ್ನು ಊಹಿಸುವುದು ಸಹ ಅಸಾಧ್ಯ. ಇತ್ತೀಚಿನ ದಿನಗಳಲ್ಲಿ ಪರಿಸರದ ಬಗೆಗಿನ ನಿಷ್ಕಾಳಜಿಯಿಂದ ಎಲ್ಲೆಡೆ ಪ್ರಕೃತಿ ವಿಕೋಪಗಳು ಉಂಟಾಗುತ್ತಿರುವುದು ಆತಂಕಕಾರಿಯಾಗಿದೆ. ಪರಿಸರದ ಬಗ್ಗೆ ಜಾಗೃತಿ ಮೂಡದೇ ಇದ್ದಲ್ಲಿ ವಿನಾಶ ನಿಶ್ಚಿತವಾಗಿದೆ. ಸಸಿಗಳನ್ನು ನೆಟ್ಟು ಪೋಷಿಸುವುದು ಇಂದಿನ ದಿನಮಾನದ ಅನಿವಾರ್ಯತೆಯಾಗಿದ್ದು, ವಿದ್ಯಾರ್ಥಿಗಳು ತಮ್ಮ ನೆರೆಹೊರೆ, ಕಾಲೇಜು ಹಾಗೂ ಮನೆಯಂಗಳದಲ್ಲಿ ಸಾಧ್ಯವಾದಷ್ಟು ಸಸಿಗಳನ್ನು ನೆಟ್ಟು ಪೋಷಿಸಲು ಕರೆ ನೀಡಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಚೇರ್‌ಮನ್ ಪ್ರೊ. ರಾಜೇಶ ಕುಲಕರ್ಣಿ, ಆಡಳಿತ ಮಂಡಳಿಯ ಸದಸ್ಯರಾದ ಪ್ರೊ. ರೋಹಿತ್ ಹಾಗೂ ಪ್ರೊ. ರಾಹುಲ್ ಒಡೆಯರ್, ಪ್ರೊ. ಸೈಯದ್ ಮತೀನ್ ಮುಲ್ಲಾ, ಆಡಳಿತಾಧಿಕಾರಿಗಳಾದ ಎಂ.ಸಿ. ಹಿರೇಮಠ ಹಾಗೂ ಕಾಲೇಜಿನ ಬೋಧಕ-ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಆಡಳಿತಾಧಿಕಾರಿ ಮೃತ್ಯುಂಜಯ ಹಿರೇಮಠ, ಹಿರಿಯ ಉಪನ್ಯಾಸಕ ಮುರಳೀಧರ ಸಂಕನೂರ ಸೇರಿದಂತೆ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.




ಗದುಗಿನ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ ಗುರುವಾರ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಸಂಸ್ಥೆಯ ಆವರಣದಲ್ಲಿ ಸಸಿಗಳನ್ನು ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಸಂಸ್ಥೆಯ ಪ್ರಾಚಾರ್ಯ ಭರಮಪ್ಪ ಬಡಪ್ಪವರ, ಇ&ಸಿ ವಿಭಾಗಾಧಿಕಾರಿ ಜೈನಾಬಿ, ಯಾಂತ್ರಿಕ ವಿಭಾಗಾಧಿಕಾರಿ ಡಾ. ಶಿವಾನಂದ ಪೂಜಾರ, ಕಂಪ್ಯೂಟರ್ ಸೈನ್ಸ್ ವಿಭಾಗಾಧಿಕಾರಿ ಮಂಗಳಗೌರಮ್ಮ ಶಿವಸಿಂಪಿಗೇರ, ಸಿವಿಲ್ ವಿಭಾಗಾಧಿಕಾರಿ ಕೊಟ್ರಗೌಡ, ಕಛೇರಿ ಅಧೀಕ್ಷಕರುಗಳಾದ ವೀರೇಶ ಕಂಠಿಮಠ, ರಮೇಶ ಮಾವಿನಕಾಯಿ ಹಾಗೂ ಸಂಸ್ಥೆಯ ಎಲ್ಲ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka